ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –206 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 07–03–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 206 | RNI No: KARKAN/2023/88462 | KA/SK/CTA-874/2024-2026 | Chitradurga | Date: 07-03-2025 Friday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಇತಿಹಾಸದ ಬಗ್ಗೆ ತಿಳುವಳಿಕೆಯಿಲ್ಲದಿದ್ದರೆ ಏನೂ ಸಾಧನೆ ಮಾಡಲು ಆಗುವುದಿಲ್ಲ 2
ಸಣ್ಣಕೈಗಾರಿಕೆ ನಿಗಮದಲಾಭಾಂಶ ಚೆಕ್ ಸಿಎಂಗೆ ಹಸ್ತಾಂತರ: ಕಾರ್ಯಕ್ಕೆ ಸಂತಸ 3
ನಾಯಕನಹಟ್ಟಿ ಜಾತ್ರೆ: ವಸ್ತು ಪ್ರದರ್ಶನ ವ್ಯವಸ್ಥಿತವಾಗಿರಲಿ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ನಾಯಕನಹಟ್ಟಿ ಜಾತ್ರೆ: 200 ಜಾತ್ರಾ ವಿಶೇಷ ವಾಹನಗಳ ಕಾರ್ಯಾಚರಣೆ



» ಚಿತ್ರದುರ್ಗ

ಶ್ರೀ ಕ್ಷೇತ್ರ ನಾಯಕನಹಟ್ಟಿಯಲ್ಲಿ ಮಾರ್ಚ್ 15 ರಿಂದ 17 ರವರೆಗೆ ಜರುಗಲಿರುವ ಶ್ರೀಗುರುತಿಪ್ಪೇರುದ್ರಸ್ವಾಮಿ ರಥೋತ್ಸವ ಅಂಗವಾಗಿ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗದ ವತಿಯಿಂದ ಚಿತ್ರದುರ್ಗ, ಚಳ್ಳಕೆರೆ, ಹೊಸದುರ್ಗ, ಪಾವಗಡ ಘಟಕಗಳಿಂದ ಒಟ್ಟು 200 ಜಾತ್ರಾ ವಿಶೇಷ ವಾಹನಗಳ ಕಾರ್ಯಾಚರಣೆ ಮಾಡಲು ಕ್ರಮಕೈಗೊಳ್ಳಲಾಗಿದೆ. ವಿಶೇಷ ವಾಹನಗಳ ಕಾರ್ಯಾಚರಣೆ ಮಾರ್ಗ ಇಂತಿದೆ. ಚಿತ್ರದುರ್ಗ–ನಾಯಕನಟ್ಟಿ ವಯಾ ಬೆಳಗಟ್ಟ, ಹಾಯ್ಕಲ್, ಚಳ್ಳಕೆರೆ. ಚಳ್ಳಕೆರೆ–ನಾಯಕನಹಟ್ಟಿ ವಯಾ ನೇರ್ಲಗುಂಟೆ. ಹಿರಿಯೂರು–ನಾಯಕನಹಟ್ಟಿ ವಯಾ ಸಾಣಿಕೆರೆ–ಚಳ್ಳಕೆರೆ–ನೇರ್ಲಗುಂಟೆ.

ನಾಯಕನಹಟ್ಟಿ–ಪರಶುರಾಂಪು ವಯಾ ಚಳ್ಳಕೆರೆ ಮಾರ್ಗದಲ್ಲಿ ಸಂಚರಿಸಲಿವೆ. ಪ್ರಯಾಣಿಕರ ಜನದಟ್ಟಣೆಗನುಗುಣವಾಗಿ ಹೆಚ್ಚುವರಿ ವಾಹನ ಕಾರ್ಯಾಚರಣೆ ಮಾಡಲಾಗುವುದು. ಭಕ್ತಾಧಿಗಳು ವಿಶೇಷ ವಾಹನಗಳ ಸದುಪಯೋಗವನ್ನು ಉತ್ತಮ ರೀತಿಯಿಂದ ಪಡೆದುಕೊಳ್ಳಬೇಕು ಎಂದು ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಚೇಳೂರು ಟೌನ್‌ನ ನಿವಾಸಿ ಸಂತೋಷ ತಂದೆ ಹನುಮಂತಪ್ಪ (ಸು.32 ವರ್ಷ) ಎಂಬ ವ್ಯಕ್ತಿ ಕಾಣೆಯಾದ ಕುರಿತು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಸಂತೋಷ್ ಸು.5.6 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ತಲೆಯಲ್ಲಿ ಸುಮಾರು 3 ಇಂಚು ಉದ್ದದ ಕಪ್ಪು ಕೂದಲು, ಕಾಣೆಯಾದ ದಿನ ಮೆರೂನ್ ಬಣ್ಣದ ಟೀ ಶರ್ಟ್, ಗ್ರೇ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಕನ್ನಡ ಮತ್ತು ಇಂಗ್ಲಿಷ್, ತೆಲಗು ಭಾಷೆ ಮಾತನಾಡುತ್ತಾರೆ. ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಹೊಳಲ್ಕೆರೆ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಪೊಲೀಸ್ ಉಪ ನಿರೀಕ್ಷಕರು ತಿಳಿಸಿದ್ದಾರೆ.

### ಹಾಡುಹಗಲೇ ಬೈಕ್ ಡಿಕ್ಕಿಯಲ್ಲಿಟ್ಟು ಲಾಕ್ ಮಾಡಿದ್ದ 1.40 ಹಣ ಕಳವು

» ಚಳ್ಳಕೆರೆ

ನಗರದ ವ್ಯಾಪ್ತಿಯಲ್ಲಿ ಇತ್ತೀಚಿನ ದಿನಗಳಲ್ಲಿ ಕಳ್ಳರ ಕೈಚಳ ಮಿತಿಮೀರಿದ್ದು, ಕಳದವಾರಷ್ಟೇ ವಾಸವಿ ಕಾಲೋನಿಯ ಮನೆಯೊಂದಕ್ಕೆ ಅಧಿಕಾರಗಳ ಸೋಗಿನಲ್ಲಿ ಭೇಟಿ ನೀಡಿ ಮನೆಯವರನ್ನು ಹೆದರಿಸಿ, ಬೆದರಿಸಿ ಲಕ್ಷಾಂತರ ಮೌಲ್ಯದ ಬಂಗಾರದ ಆಭರಣಗಳನ್ನು ದರೋಡೆ ಮಾಡಲಾಗಿತ್ತು. ಈ ಘಟನೆ ಇನ್ನೂ ಸಾರ್ವಜನಿಕರನ್ನು ಕಾಡುವ ಸಂದರ್ಭದಲ್ಲೇ ಬೆಂಗಳೂರು ರಸ್ತೆಯ ವಾಸವಿ ಮಹಲ್ ಪಕ್ಕ ಗುರುವಾರ ಮಧ್ಯಾಹ್ನ ಕಿರಾಣಿ ಅಂಗಡಿಯಲ್ಲಿ ಸಾಮಾಗ್ರಿತರಲು ತನ್ನ ಮೋಟಾರ್‌ಬೈಕ್‌ನ ಬಾಕ್ಸ್‌ನಲ್ಲಿ ಲಾಕ್‌ಮಾಡಿಟ್ಟಿದ್ದ ಹಣವನ್ನು ಯಾರೋ ದೋಚಿದ್ದಾರೆ. ನರಹರಿ ನಗರದ ರವಿಕುಮಾರ್ ಎಂಬುವವರು ಬಳ್ಳಾರಿ ರಸ್ತೆಯ ಕರ್ನಾಟಕ ಬ್ಯಾಂಕ್‌ನಿಂದ 1.40 ಲಕ್ಷ ಹಣವನ್ನು ಡ್ರಾಮಾಡಿ ತನ್ನ ಬೈಕ್‌ನ ಸೀಟಿನ ಕೆಳಭಾಗದ ಡಿಕ್ಕಿಯಲ್ಲಿಟ್ಟು ಲಾಕ್ ಮಾಡಿ ಅಂಗಡಿಗೆ ತೆರಳಿ ವಾಪಾಸ್ ಬರುವ ಕೆಲವೇ ನಿಮಿಷದಲ್ಲಿ ಬಾಕ್ಸ್‌ಲಾಕ್ ಹೊಡೆದ ಕಳ್ಳರು ಅದರಲ್ಲಿದ್ದ 1.40 ಲಕ್ಷ ಹಣವನ್ನು ಚಾಣಾಕ್ಷತನದಿಂದ ದೋಚಿ ಪರಾರಿಯಾಗಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಮರಳು ಟ್ರಾಕ್ಟರ್ ವಶ :** ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೊಡ್ಲಾರಹಟ್ಟಿ ಬಳಿ ಯಾವುದೇ ಅನುಮತಿ ಇಲ್ಲದೆ ಟ್ರಾಕ್ಟರಲ್ಲಿ ಮರಳು ತುಂಬಿಕೊಂಡು ಸಾಗಾಟ ಮಾಡುತ್ತಿದ್ದು, ಟ್ರಾಕ್ಟರ್ ಚಾಲಕ ಬೋರಯ್ಯರವರನ್ನು ವಶಕ್ಕೆ ಪಡೆದು ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

# ಗ್ಯಾರಂಟಿ ಹೆಸರಿನಲ್ಲಿ ದಲಿತರಿಗೆ ಅನ್ಯಾಯ

» ಚಿತ್ರದುರ್ಗ

ಪಂಚ್ ಗ್ಯಾರಂಟಿ ಹೆಸರಿನಲ್ಲಿ ದಲಿತರ ಅಭಿವೃದ್ಧಿಗೆ ಮೀಸಲಿಟ್ಟಿರುವ ಹಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ದುರ್ಬಳಕೆ ಮಾಡಿಕೊಂಡು ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ, ಕಚೇರಿ ಬಳಿ ಬೃಹತ್ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಆಕ್ರೋಶ ಹೊರಹಾಕಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಬಿಜೆಪಿ.ಕಾರ್ಯದರ್ಶಿಗಳಾದ ಅಂಬಿಕಾ ಹುಲಿನಾಯ್ಕರ್ ಸಿದ್ದರಾಮಯ್ಯರ ನೇತೃತ್ವದ ಕಾಂಗ್ರೆಸ್ ಸರಕಾರದಲ್ಲಿ ಹಿಂದುಳಿದ ಸಮುದಾಯಗಳಿಗೆ ಆರ್ಥಿಕ ಶಕ್ತಿ ಕೊಟ್ಟು ಅವರನ್ನು ಮುಂದಕ್ಕೆ ತರುವ ಕೆಲಸ ಮಾಡಲು ಸಾಧ್ಯ ವಾಗುತ್ತಿಲ್ಲ. ಮುಸ್ಲಿಂ ಸಮುದಾಯವನ್ನು ಓಲೈಸಲು ಹೊರಟ ಕಾಂಗ್ರೆಸ್ ಸರಕಾರವು, ಇತರೆ ಹಿಂದುಳಿದ ವರ್ಗಗಳಿಗೆ ಅನ್ಯಾಯ ಮಾಡಲು ಹೊರಟಿದೆ. ಸಿದ್ದ ರಾಮಯ್ಯನವರು ನಿಜವಾಗಿಯೂ ಅಹಿಂದ ನಾಯಕರೇ ಆಗಿದ್ದರೆ ಇಷ್ಟೊತ್ತಿಗೆ ಅನೇಕ ಹಿಂದುಳಿದ ಸಮಾಜಗಳಿಗೆ ಆರ್ಥಿಕ ಶಕ್ತಿ ತುಂಬಬೇಕಿತ್ತು. ಬಡವರ ಹೊಟ್ಟೆ ಮೇಲೆ ಹೊಡೆದ ಕಾಂಗ್ರೆಸ್ ಸರ್ಕಾರ ತೊಲಗಬೇಕು. ರಾಜ್ಯ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿ ಕಾರ್ಯಕ್ಕೆ ಮೀಸಲಿಟ್ಟ ಎಲ್ಲ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಕೊಟ್ಟಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಸರ್ಕಾರ ಪರಿಶಿಷ್ಟರ ಹಣ ನುಂಗಿದೆ. ಎಸ್‌ಸಿಪಿ–ಟಿಎಸ್‌ಪಿ




ಅನುದಾನ ಅನ್ಯ ಯೋಜನೆಗಳಿಗೆ ಬಳಕೆ ಮಾಡಬಾರದು ಎಂದು ಕಾನೂನಿನಲ್ಲಿ ಇದೆ. ಆದರೆ, ಸಿದ್ದರಾಮಯ್ಯ ನೇತೃತ್ವದಲ್ಲಿ ಗ್ಯಾರಂಟಿಗೆ ಬಳಕೆ ಮಾಡಿದ್ದು ಖಂಡನೀಯ. ಚುನಾವಣೆ ಪೂರ್ವದಲ್ಲಿ ಎಸ್‌ಸಿ,ಎಸ್‌ಟಿ ಸಮುದಾಯ ಸೇರಿ ಎಲ್ಲರಿಗೂ ನ್ಯಾಯ ಕೊಡುವುದಾಗಿ ಹಾಗೂ ಅಭಿವೃದ್ಧಿ ಮಾಡುವುದಾಗಿ ಸುಳ್ಳು ಹೇಳಿ ಅಧಿಕಾರಕ್ಕೆ ಬಂದಿದೆ ಎಂದರು.

ಖನಿಜ ನಿಗಮದ ಮಾಜಿ ಆಧ್ಯಕ್ಷರಾದ ಲಿಂಗಮೂರ್ತಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ತನ್ನ ಅಧಿಕಾರದ ಅವಧಿಯಲ್ಲಿ ದಲಿತರಿಗಾಗಿ ಮೀಸಲಿಟ್ಟದ್ದ ಹಣ ಗ್ಯಾರಂಟಿಗಳಿಗೆ ಖರ್ಚು ಮಾಡಿದೆ. ಸರಕಾರದಲ್ಲಿ ದುಡ್ಡಿಲ್ಲ, ಬೊಕ್ಕಸ ಖಾಲಿಯಾದ ಕಾರಣ ದಲಿತರ ಉದ್ಧಾರಕ್ಕೆ ಮೀಸಲಾಗಿಟ್ಟದ್ದ ಹಣವನ್ನು ಗ್ಯಾರಂಟಿಗಳಿಗೆ ಬಳಸುತ್ತಿದ್ದಾರೆ. ನಾನು ಸಿದ್ದಣ್ಣ, ಲೂಟಿ ಗ್ಯಾರಂಟಿ ಅಣ್ಣ ಎಂಬಂತೆ ವರ್ತಿಸುತ್ತಿದ್ದಾರೆ ಎಂದು ಟೀಕಿಸಿದರು.

ರಾಜ್ಯವನ್ನು ಭಿಕ್ಷೆ ಬೇಡುವ ಸ್ಥಿತಿಗೆ ಸಿದ್ದರಾಮಯ್ಯನವರು ತಂದು ನಿಲ್ಲಿಸಿದ್ದಾರೆ. ಸಿದ್ದರಾಮಯ್ಯನವರು ಸಾಲದ ವಿಚಾರದಲ್ಲೂ ಚಾಂಪಿಯನ್ ಎಂದು ಆಕ್ಷೇಪಿಸಿದರು. ಎಲ್ಲ ನಿಗಮ, ತಾಂಡಾ ಅಭಿವೃದ್ಧಿ ನಿಗಮಗಳಿಗೆ ಕನಿಷ್ಠ ಮೊತ್ತವನ್ನು ಈ ಮನೆಹಾಳ ಕಾಂಗ್ರೆಸ್ ಸರಕಾರ ನೀಡಿದೆ ಎಂದು ಆರೋಪಿಸಿ ಪರಿಶಿಷ್ಟಜಾತಿ, ಪರಿಶಿಷ್ಟ ವರ್ಗ, ಬುಡಕಟ್ಟು ಜನಾಂಗ, ಅಲೆಮಾರಿ, ಅರೆಅಲೆಮಾರಿಗಳ ಅಭ್ಯುದಯಕ್ಕಾಗಿ ಮೀಸಲಿಟ್ಟಿರುವ ಹಣವನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಕ್ಕಾಗಿ ಬಳಸುತ್ತಿರುವುದು ಅಕ್ಷಮ್ಯ ಅಪರಾಧ. ಹಾಗಾಗಿ ಈ ಬಾರಿಯ ಬಜೆಟ್‌ನಲ್ಲಿ ಎಸ್ಸಿಪಿ. ಟಿ.ಎಸ್ಪಿ. ಹಣವನ್ನು ಬೇರೆ ಉದ್ದೇಶಗಳಿಗೆ ಬಳಸುವುದಿಲ್ಲವೆಂದು ನಿರ್ಣಯ ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

ಈ ಪ್ರತಿಭಟನೆಯಲ್ಲಿ ಎಸ್ಸಿಪಿ. ಟಿಎಸ್ಪಿ. ರಾಜ್ಯ ಜನಾಂದೋಲನ ಸಮಿತಿ ಸದಸ್ಯ ಸಂಸದರು ಹಾಗೂ ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ, ಮಾಜೀ ಶಾಸಕಸರಾದ ಎಸ್,ಕಡೆ.ಬಸವರಾಜನ್,ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್ ಖಂಜಾಚಿ ಮಾಧುರಿ ಗೀರಿಶ್, ರೈತ ಮೋರ್ಚಾದ ವೆಂಕಟೇಶ್ ಯಾದವ್, ಸೋಮುನಾಥ್, ಮೋಹನ್, ಯೋಗಿಶ್ ಸಹ್ಯಾದ್ರಿ,ಹನುಮಂತಪ್ಪ, ಎಸ್ಸಿ. ಮೋರ್ಚಾ ಹನುಮಂತಪ್ಪ ಓಬಲೇಶ್, ಓ.ಬಿ.ಸಿ.ಮೋರ್ಚಾದ ನರೇಂದ್ರ ರಂಗಪ್ಪ, ಎಸ್ಸಿ ಮೋರ್ಚಾ ಶಿವಣ್ಣ, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಬೇದ್ರೇ ನಾಗರಾಜ್, ಛಲವಾದಿ ತಿಪ್ಪೇಸ್ವಾಮಿ, ಜಯಪಾಲಯ್ಯ, ಕುಮಾರಸ್ವಾಮಿ, ರಾಮದಾಸ್, ಶಿವಣ್ಣ, ತಿಪ್ಪೇಸ್ವಾಮಿ, ರಘುಮೂರ್ತಿ, ಬಸಮ್ಮ, ಕಾಂಚನಾ, ಅಂಬಿಕಾ ಶಂಭೂ, ಲೋಕೇಶ್ ನಾಗರಾಜ್ ಸೇರಿದಂತೆ ಪಕ್ಷದ ಕಾರ್ಯಕರ್ತರು,ಪದಾಧಿಕಾರಿಗಳು,ದಲಿತ ಪರ ಸಂಘಟನೆಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಇದಕ್ಕೂ ಮುನ್ನಾ ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿ ಸರ್ಕಾರದ ವಿರುದ್ದ ಘೋಷಣೆಗಳನ್ನು ಕೂಗಲಾಯಿತು.

### ಉಜ್ಜೀವನ್ ಸಣ್ಣ ಹಣಕಾಸು ಬ್ಯಾಂಕ್‌ನಿಂದ ಜಿಲ್ಲಾಸ್ಪತ್ರೆಗೆ ಕೊಡುಗೆ

# ರೋಗಿಗಳ ನಿರೀಕ್ಷಣಾ ತಂಗುದಾಣ ನಿರ್ಮಾಣ

» ಚಿತ್ರದುರ್ಗ

ಉಜ್ಜೀವನ್ ಸಣ್ಣ ಹಣಕಾಸು ಬ್ಯಾಂಕ್ ವತಿಯಿಂದ ಚಿತ್ರದುರ್ಗ ನಗರ ಜಿಲ್ಲಾಸ್ಪತ್ರೆಯ ಆವರಣದಲ್ಲಿ ರೋಗಿಗಳ ನಿರೀಕ್ಷಣಾ ತಂಗುದಾಣ ನಿರ್ಮಿಸಿ, ಜಿಲ್ಲಾಸ್ಪತ್ರೆಗೆ ಕೊಡುಗೆಯಾಗಿ ನೀಡಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರು ಬುಧವಾರ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ ರೋಗಿಗಳ ನಿರೀಕ್ಷಣಾ ತಂಗುದಾಣವನ್ನು ಉದ್ಘಾಟಿಸಿದರು.

ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ಕುಮಾರ್ ಬಾಬು ಮಾತನಾಡಿ, ಜಿಲ್ಲಾಸ್ಪತ್ರೆಗೆ ಸುಸಜ್ಜಿತವಾದ ರೋಗಿಗಳ ಮತ್ತು ಸಾರ್ವಜನಿಕರಿಗೆ ಉಪಯುಕ್ತವಾದ ತಂಗುದಾಣ ಉಜ್ಜೀವನ್ ಬ್ಯಾಂಕ್ ವತಿಯಿಂದ ನಿರ್ಮಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಉಜ್ಜೀವನ್ ಬ್ಯಾಂಕ್ ವಿತರಣಾ ವ್ಯವಸ್ಥಾಪಕ ಬಾಲಕೃಷ್ಣ ಮಾತನಾಡಿ, ಉಜ್ಜೀವನ್ ಬ್ಯಾಂಕ್‌ನ ಚೋಟೆ ಕದಮ್ ಯೋಜನೆಯಡಿ ಪರಿಸರ, ಆರೋಗ್ಯ, ಕುಡಿಯುವ ನೀರು, ಸಾರ್ವಜನಿಕ ಶೌಚಾಲಯ,



ಬಸ್ ತಂಗುದಾಣ ನಿರ್ಮಾಣದ ಜತೆಗೆ ಶಾಲೆಯ ಶೌಚಾಲಯ, ಆರೋಗ್ಯ ಕೇಂದ್ರಗಳ ನವೀಕರಣಕ್ಕೆ ಆರ್ಥಿಕ ನೆರವು ನೀಡುವ ಮೂಲಕ ಉಜ್ಜೀವನ್ ಬ್ಯಾಂಕ್ ಸಾರ್ವಜನಿಕ ಅಭಿವೃದ್ಧಿಗೆ ತನ್ನದೇ ಆದ ರೀತಿಯಲ್ಲಿ ಸೇವೆ ಸಲ್ಲಿಸುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಉಜ್ಜೀವನ್ ಬ್ಯಾಂಕ್‌ನ ಏರಿಯಾ ಮ್ಯಾನೇಜರ್ ಮಂಜುನಾಥ್, ಪ್ರಾದೇಶಿಕ ಮುಖ್ಯಸ್ಥ ಬಾಲಾಜಿ, ಕ್ಲಸ್ಟರ್ ಮುಖ್ಯಸ್ಥ ಕರುಣಾ ವಿನಾಯಕ, ಶಾಖಾ ವ್ಯವಸ್ಥಾಪಕ ಸೋಮಶೇಖರಪ್ಪ ಹಾಗೂ ಬ್ಯಾಂಕ್ ಸಿಬ್ಬಂದಿ ಇದ್ದರು.

## ಎಬಿವಿಪಿಯಿಂದ ಅರಳುವ ಪ್ರತಿಭೆ ಯುವ ಬರಹಗಾರರ ಶಿಬಿರ



» ಚಿತ್ರದುರ್ಗ

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ 2025 ನೇ ಮಾರ್ಚ್ 7,8,9 ರಂದು ಚಿತ್ರದುರ್ಗದ ಶ್ರೀ ಮುರುಘರಾಜೇಂದ್ರ ಮಠದ ಶ್ರೀ ಅಲ್ಲಮಪ್ರಭು ಸಂಶೋಧನ ಕೇಂದ್ರ ಸಭಾಂಗಣದಲ್ಲಿ 'ಅರಳುವ ಪ್ರತಿಭೆ' ಯುವ ಬರಹಗಾರರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ದಕ್ಷಿಣ ಪ್ರಾಂತ ರಾಜ್ಯ ಕಾರ್ಯದರ್ಶಿ ಪ್ರವೀಣ್ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಕಳೆದ 76 ವರ್ಷಗಳಿಂದ ರಾಷ್ಟ್ರ ಪುನರ್ ನಿರ್ಮಾಣಕ್ಕಾಗಿ ವಿದ್ಯಾರ್ಥಿ–ರಾಷ್ಟ್ರ ಶಕ್ತಿ ಎಂಬುದನ್ನು ಸಂಕಲ್ಪಿಸಿ, ರಾಷ್ಟ್ರದ ಸರ್ವೋನ್ನತಿ, ಏಕತೆ ಮತ್ತು ಅಖಂಡತೆಗೆ ಶ್ರಮಿಸುತ್ತಿರುವ ಏಕೈಕ ವಿದ್ಯಾರ್ಥಿ ಸಂಘಟನೆಯಾಗಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ತನ್ನ ಜವಾಬ್ದಾರಿ ನಿರ್ವಹಿಸುತ್ತಿರುವ ಜಗತ್ತಿನ ಅತಿ ದೊಡ್ಡ ವಿದ್ಯಾರ್ಥಿ ಸಂಘಟನೆಯಾಗಿದೆ.

ಪುಟ 2

## ಪ್ರಮುಖ ಸುದ್ದಿ

# ಗೃಹಲಕ್ಷ್ಮಿ ಹಣ ನೀಡಲು ಸರ್ಕಾರ ತಾಂತ್ರಿಕ ಸಮಸ್ಯೆ ನೆಪ

» ಚಿತ್ರದುರ್ಗ

ಗೃಹಲಕ್ಷ್ಮಿ ಹಣವನ್ನು ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ನೀಡುವ ಬಗ್ಗೆ ಮತ್ತು ಗ್ಯಾರಂಟಿ ಕ್ಯಾಲೆಂಡರ್ ಘೋಷಣೆ ಮಾಡುವಂತೆ ಆಗ್ರಹಿಸಿ ಚಿತ್ರದುರ್ಗ ಜಿಲ್ಲಾ ಜನತಾದಳ (ಜಾತ್ಯತೀತ) ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಚಿತ್ರದುರ್ಗ ಜಿಲ್ಲಾ ಜನತಾದಳದ ಅಧ್ಯಕ್ಷರಾದ ಜಯಣ್ಣ.ಎಂ ಕಾಂಗ್ರೆಸ್ ಪಕ್ಷದ ಗೃಹಲಕ್ಷ್ಮೀ ಮತ್ತು ಯುವ ನಿಧಿ ಸೇರಿದಂತೆ ಐದು ಗ್ಯಾರೆಂಟಿ ಯೋಜನೆಗಳ ಭರವಸೆಯೊಂದಿಗೆ ಅಧಿಕಾರಕ್ಕೆ ಏರಿತ್ತು. ಪ್ರತಿ ತಿಂಗಳು ಹಣವನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ಜಮಾ ಮಾಡುವುದಾಗಿ ಬಣ್ಣದ ಮಾತುಗಳನ್ನ ಹೇಳಿತ್ತು ಆದರೆ ಈ ಯೋಜನೆ ಶುರುವಿನಿಂದ ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ಹಣ ಹಾಕದಿರುವುದನ್ನು ಕರ್ನಾಟಕ ಪ್ರದೇಶ ಜನತಾದಳ ಪಕ್ಷ




ಖಂಡಿಸುತ್ತದೆ.

ಪ್ರತಿತಿಂಗಳುಸರಿಯಾದಸಮಯಕ್ಕೆಹಣ ಹಾಕದೆ ತಾಂತ್ರಿಕ ಸಮಸ್ಯೆಯನ್ನೊಡ್ಡುವುದು ನಿಜಕ್ಕೂ ಹಾಸ್ಯಾಸ್ಪದವಾಗಿದೆ.

ಬೆಂಗಳೂರು. ಭಾರತದ ಸಿಲಿಕಾನ್ ಕ್ಯಾಪಿಟಲ್, ಜಾಗತಿಕ ತಂತ್ರಜ್ಞಾನ ಕೇಂದ್ರದಲ್ಲಿ ಡಿಬಿಟಿ ವರ್ಗಾವಣೆ ಸರಿಪಡಿಸಲಾಗುವುದಿಲ್ಲವೇ? ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು ಆಗಿರುವ ಸಿದ್ದರಾಮಯ್ಯನವರು ಬಜೆಟ್ ರೂಪಿಸುವಲ್ಲಿ ನಿರತರಾಗಿದ್ದೀರಿ. ಆದರೆ ವಿಪರ್ಯಾಸವೆಂದರೆ, ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಹಣಕ್ಕಾಗಿ 3–4 ತಿಂಗಳು ಕಾಯಬೇಕಾಗಿದೆ. ಯಾವುದಾದರೂ ಚುನಾವಣೆಗಳು ಸಮೀಪಿಸಿದಾಗ ಮಾತ್ರ "ಮ್ಯಾಜಿಕ್" ಆಗಿ ಹಣ ಜಮವಾಗುತ್ತೆ ಎಂದು ದೂರಿದರು.

ಈಗಾಗಲೇ ಜನತಾದಳದ ಯುವಘಟಕದ ಅಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡಿ ಗ್ಯಾರಂಟಿ ಕ್ಯಾಲೆಂಡರ್ ಬಿಡುಗಡೆಗೆ ಆಗ್ರಹಿಸಿತ್ತು. ಇಂದು ಅದರ ಮುಂದಿನ ಭಾಗವಾಗಿ ನಮ್ಮ ಜಿಲ್ಲಾ ಕೇಂದ್ರದಲ್ಲಿ ಈ ಪ್ರತಿಭಟನೆಯಮೂಲಕಆಗ್ರಹಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರಾಧ ಯಶೋಧರ್, ಜಿಲ್ಲಾ ಮಹಾ ಪೃಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯ್ಕ್, ರವೀಂದ್ರಪ್ಪ, ತಾಲ್ಲೂಕು ಅಧ್ಯಕ್ಷರಾದ ಸಣ್ಣ ತಿಮ್ಮಪ್ಪ, ಹನುಮಂತಪ್ಪ, ಕರಿಬಸಪ್ಪ, ಪರಮೇಶ್ವರಪ್ಪ, ವೀರಭದ್ರಪ್ಪ, ಮಂಜುನಾಥ್, ಜಾಲಿಕಟ್ಟೆ ರುದ್ರಪ್ಪ, ಪ್ರತಾಪ್ ಜೋಗಿ, ಅಬು, ಗೀತಮ್ಮ, ಚಿದಾನಂದ, ಚನ್ನಿಗರಾಯಪ್ಪ, ಆನಂದಪ್ಪ, ಆಚಾರ್, ವಿರೇಂದ್ರಕುಮಾರ್, ಯೂಸಫ್, ಈಚಘಟ್ಟದ ಪರಮೇಶ್ವರಪ್ಪ, ಶಂಕರಮೂರ್ತಿ, ಮಠದಕುರುಬರಹಟ್ಟಿ ಈರಣ್ಣ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಾ.೦೮ರಂದು ವಾರ್ಷಿಕ ಗೌರವ ಪ್ರಶಸ್ತಿ ಮತ್ತು ಪುಸ್ತಕ ಬಹುಮಾನ ಪ್ರದಾನ

» **ಚಿತ್ರದುರ್ಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವತಿಯಿಂದ 2023-2024ನೇ ಸಾಲಿನ ಗೌರವ ಪ್ರಶಸ್ತಿ ಪ್ರದಾನ ಮತ್ತು 2022 ಹಾಗೂ 2023ನೇಯ ಸಾಲಿನ ಪುಸ್ತಕ ಬಹುಮಾನ ವಿತರಣೆ ಸಮಾರಂಭವನ್ನು ಇದೇ ಮಾರ್ಚ್ 08ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ದಿವ್ಯ ಸಾನಿಧ್ಯವಹಿಸುವರು. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್.ತಂಗಡಗಿ ಅವರು ಗೌರವ ಪ್ರಶಸ್ತಿ ಪ್ರದಾನ ಮತ್ತು ಪುಸ್ತಕ ಬಹುಮಾನ ವಿತರಣೆ ಮಾಡುವರು. ಖ್ಯಾತ ಸಾಹಿತಿ ಡಾ.ಕೆ.ಮರುಳಸಿದ್ದಪ್ಪ ಅವರು ಪ್ರಶಸ್ತಿ ಪುರಸ್ಕೃತರ ಪರಿಚಯ ಪುಸ್ತಕ ಬಿಡುಗಡೆ ಮಾಡುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಅಧ್ಯಕ್ಷ ಡಾ.ಚನ್ನಪ್ಪ ಕಟ್ಟಿ ಪ್ರಾಸ್ತಾವಿಕ ನುಡಿಗಳನ್ನಾಡುವರು. ಮುಖ್ಯ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ,ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ಡಾ.ಬಿ.ಯೋಗೇಶ್ ಬಾಬು, ಜಿ.ಎಸ್.ಮಂಜುನಾಥ, ತಾಜ್‌ಪೀರ್, ಸುಮಿತಾ ಭಾಗವಹಿಸುವರು. ಆಹ್ವಾನಿತರಾಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಭಾಗವಹಿಸುವರು. 2023ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿಗೆ ಡಾ.ಎಚ್.ಎಸ್.ರಾಘವೇಂದ್ರ ರಾವ್, ವಿಜಯ ಚೈತನ್ಯ, ಡಾ.ನಟರಾಜ್ ಹುಳಿಯಾರ್, ಡಾ.ದು.ಸರಸ್ವತಿ ಹಾಗೂ ಡಾ.ಎಚ್.ಎಂ.ಕುಮಾರಸ್ವಾಮಿ ಮತ್ತು 2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿಗೆ ಡಾ.ಆರ್.ಕೆ.ಕುಲಕರ್ಣಿ, ಡಾ.ಕರೀಗೌಡ ಬೀಚನಹಳ್ಳಿ, ಡಾ.ರಾಜೇಂದ್ರ ಚೆನ್ನಿ, ಬೋಡೆ ರಿಯಾಜ್ ಅಹ್ಮದ್, ಡಾ.ಬಸು ಬೇವಿನಗಿಡದ ಪುರಸ್ಕೃತರಾಗಿದ್ದಾರೆ. ಕೆ.ಆರ್.ಮೈತ್ರೇಯಿ, ಜಯಶ್ರೀ ಭಟ್, ಬಿ.ಆರ್.ಜಯರಾಮರಾಜೇ ಅರಸ್, ಡಾ.ವಿಕ್ರಮ ವಿಸಾಜೆ ಹಾಗೂ ಎಂ.ಜಿ.ಶುಭಮಂಗಳ ಅವರು 2022ನೇ ಸಾಲಿನ ಪುಸ್ತಕ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾರೆ. ಹಾಗೆಯೇ ಸುಕನ್ಯಾ ಕನಾರಳ್ಳಿ, ಶ್ರೀಧರ ಹೆಗ್ಗೋಡು, ವಿಕಾಸ್ ಆರ್.ಮೌರ್ಯ, ಸುಬ್ಬಯ್ಯ ಜಿ.ಭಾಗ್ವತ್ ಹಾಗೂ ತೋಂಟದ ಸಿದ್ದರಾಮ ಸ್ವಾಮಿಗಳು 2023ನೇ ಸಾಲಿನ ಪುಸ್ತಕ ಬಹುಮಾನಕ್ಕೆ ಆಯ್ಕೆಯಾಗಿದ್ದಾರೆ ಎಂದು ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟ್ರಾರ್ ಈಶ್ವರ್ ಕು.ಮಿರ್ಜಿ ತಿಳಿಸಿದ್ದಾರೆ.

### ಇಬ್ಬರು ಕಿಶೋರ ಕಾರ್ಮಿಕರ ಪತ್ತೆ

» **ದಾವಣಗೆರೆ**

ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಹಾಗೂ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ತಿದ್ದುಪಡಿ ಕಾಯ್ದೆ ಕುರಿತು ಸೋಮವಾರ ವಿವಿಧ ಅಂಗಡಿ, ಹೋಟೆಲ್ ಗ್ಯಾರೇಜ್ ಹಾಗೂ ವಾಣಿಜ್ಯ ಸಂಸ್ಥೆಗಳಿಗೆ ಭೇಟಿ ನೀಡಿ, ಅಧಿಕಾರಿಗಳು ತಪಾಸಣೆ ನಡೆಸಿದರು. ತಪಾಸಣೆಯಲ್ಲಿ ಇಬ್ಬರು ಕಿಶೋರ ಕಾರ್ಮಿಕರು ಅಪಾಯಕಾರಿ ಅಲ್ಲದ ಉದ್ದಿಮೆಯಲ್ಲಿ ಪತ್ತೆಯಾಗಿದ್ದು, ಮಾಲೀಕರ ವಿರುದ್ದ ವಿವಿಧ ಕಾರ್ಮಿಕ ಕಾಯ್ದೆಯಡಿ ನೋಟಿಸ್ ಜಾರಿ ಮಾಡಿ ಹಾಗೂ ಮಾಲೀಕರಿಗೆ ಕರಪತ್ರ ಮತ್ತು ಸ್ಟಿಕ್ಕರ್ಸ್ ನೀಡಿ ಜಾಗೃತಿ ಮೂಡಿಸಲಾಯಿತು. ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ಆರ್.ನಾಗೇಶ್, ಹಾಗೂ ಮಕ್ಕಳ ರಕ್ಷಣಾ ಘಟಕದ ವೀರೇಶ್, ಯೋಜನಾ ನಿರ್ದೇಶಕರಾದ ಪ್ರಸನ್ನ.ಇ.ಎನ್ ಉಪಸ್ಥಿತರಿದ್ದರು.

### ವ್ಯಕ್ತಿ ಕಾಣೆ

» **ದಾವಣಗೆರೆ**

ಬಡಾವಣೆ ಪೊಲೀಸ್ ಠಾಣೆಯ ವ್ಯಾಪ್ತಿಯ ನಗರದ 4ನೇ ಮೇನ್ 7 ನೇ ಕ್ರಾಸ್ ಯಲ್ಲಮ್ಮ ನಗರದ ಕುಮಾರ.ಪಿ ಬಿನ್ ಲೇ.ಫಕ್ಕೀರಪ್ಪ 37 ವರ್ಷ, ಇವರು 2024 ರ ಏಪ್ರಿಲ್ 4 ರಂದು ಮನೆಯಿಂದ ಹೋದವರು ಇದೂವರೆಗೂ ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ ಇಂತಿದೆ. ಸದೃಡ ಮೈಕಟ್ಟು, 5.6 ಅಡಿ, ಕೋಲು ಮುಖ, ಗೋಧಿ ಮೈಬಣ್ಣ, ಎಡಗೈಯಲ್ಲಿ ಗಾಯದ ಗುರುತು ಇದೆ. ಕನ್ನಡ ಭಾಷೆ ಮಾತನಾಡುತ್ತಾರೆ. ಹಳದಿ ಬಿಳಿ ಬಣ್ಣದ ಶರ್ಟ್, ಕಪ್ಪು ಪ್ಯಾಂಟ್ ಧರಿಸಿರುತ್ತಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಬಡಾವಣೆ ಪೊಲೀಸ್ ಠಾಣೆಯ ದೂ.ಸಂ: 08192-259213, 253400, 253100 ಗೆ ಮಾಹಿತಿ ನೀಡುವಂತೆ ಬಡಾವಣೆ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

# ಇತಿಹಾಸದ ಬಗ್ಗೆ ತಿಳುವಳಿಕೆಯಿಲ್ಲದಿದ್ದರೆ ಏನೂ ಸಾಧನೆ ಮಾಡಲು ಆಗುವುದಿಲ್ಲ: ಪ್ರೊ.ಕುಂಬಾರ್

» **ಚಿತ್ರದುರ್ಗ**

ಇತಿಹಾಸದ ಬಗ್ಗೆ ತಿಳುವಳಿಕೆಯಿಲ್ಲದಿದ್ದರೆ ಏನೂ ಸಾಧನೆ ಮಾಡಲು ಆಗುವುದಿಲ್ಲ ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ್ ತಿಳಿಸಿದರು.

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇತಿಹಾಸ ವಿಭಾಗ ಸರ್ಕಾರಿ ಕಲಾ ಕಾಲೇಜು(ಸ್ವಾಯತ್ತ) ಇತಿಹಾಸ ಅಧ್ಯಾಪಕರ ವೇದಿಕೆ, ದಾವಣಗೆರೆ ವಿಶ್ವವಿದ್ಯಾನಿಲಯ ವತಿಯಿಂದ ಸರ್ಕಾರಿ ಕಲಾ ಕಾಲೇಜಿನಲ್ಲಿ ಚಿತ್ರದುರ್ಗ ಜಿಲ್ಲೆಯ ಸ್ಥಾನಿಕ ಸಂಸ್ಥಾನಗಳು ಎರಡು ದಿನಗಳ ವಿಚಾರ ಸಂಕಿರಣವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಕಲಾ ಕಾಲೇಜಿಗೆ ತನ್ನದೆ ಆದ ಇತಿಹಾಸವಿದೆ. ಸ್ವಾತಂತ್ರ್ಯ ನಂತರ ಆರಂಭವಾದ ಕಾಲೇಜುಗಳಲ್ಲಿ ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜು ಸೇರಿದೆ. ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ಒಳಪಡುವ 130 ಕಾಲೇಜುಗಳಲ್ಲಿ ಸರ್ಕಾರಿ ಕಲಾ ಕಾಲೇಜು ಸ್ವಾಯತ್ತಕ್ಕೊಳಪಟ್ಟಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಇತಿಹಾಸ ತಿಳಿಯದವರು ಇತಿಹಾಸ ಸೃಷ್ಟಿಸಲಾರರು ಎಂದು ಹೇಳಿರುವ ಮಾತು ಪ್ರತಿಯೊಬ್ಬರಿಗೂ ಅನ್ವಯಿಸುತ್ತದೆ. ನಾಗರಹಾವು ಚಿತ್ರದ ಮೂಲಕ ಚಿತ್ರದುರ್ಗದ ಏಳುಸುತ್ತಿನ ಕೋಟೆ ನಾಡಿನಾದ್ಯಂತ ಪ್ರಸಿದ್ಧಿ ಪಡೆದಿದೆ.



ಪ್ರತಿ ವಿಷಯಕ್ಕೂ ಒಂದೊಂದು ಇತಿಹಾಸವಿದೆ. ಉಪನ್ಯಾಸಕರು, ಪ್ರಾಧ್ಯಾಪಕರುಗಳು ಮೊದಲು ಚಿತ್ರದುರ್ಗದ ಪಾಳೆಯಗಾರರು, ವೀರವನಿತೆ ಒನಕೆ ಓಬವ್ವಳ ಇತಿಹಾಸವನ್ನು ತಿಳಿದುಕೊಂಡು ವಿದ್ಯಾರ್ಥಿಗಳಿಗೆ ಪರಿಚಯಿಸಬೇಕು. ಮದಕರಿನಾಯಕರ ಕಾಲದಲ್ಲಿ ಆರ್ಥಿಕ, ಸಾಮಾಜಿಕ, ಕೌಟುಂಬಿಕ ಜೀವನ ಹೇಗಿತ್ತೆನ್ನುವುದರ ಬಗ್ಗೆ ಚಿಂತಿಸುವ ಅಗತ್ಯವಿದೆ ಎಂದು ಹೇಳಿದರು.ಇಂತಹ ವಿಚಾರ ಸಂಕಿರಣಗಳಲ್ಲಿ ನಡಾವಳಿ ಮಾಡಿ ರಾಜ್ಯ ಸರ್ಕಾರಕ್ಕೆ ಕಳಿಸಿ. ಇತಿಹಾಸ ಪಠ್ಯಪುಸ್ತಕಗಳಲ್ಲಿರಬೇಕು. ಪಠ್ಯದಲ್ಲಿನ ಸಿಲಬಸ್ ಹೊರತುಪಡಿಸಿ ಬೇರೆ ವಿಷಯಗಳ ಕುರಿತು ಮಕ್ಕಳಿಗೆ ಬೋಧಿಸಬೇಕಿದೆ. ಹಳೆಯ ಚಿತ್ರದುರ್ಗ ಜಿಲ್ಲೆಯ ಇತಿಹಾಸ, ಆಗು ಹೋಗುಗಳ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು. ಗುಡ್ಡದರಂಗವ್ವನಹಳ್ಳಿ ಸಮೀಪವಿರುವ ಸ್ನಾತಕೋತ್ತರ ಕೇಂದ್ರಕ್ಕೆ ವೀರವನಿತೆ ಒನಕೆ ಓಬವ್ವಳ ಹೆಸರನ್ನಿಡಲು ತೀರ್ಮಾನಿಸಿದ್ದೇವೆಂದರು.

ಇತಿಹಾಸ ಸಂಶೋಧಕ ವಿಶ್ರಾಂತ ಪ್ರಾಂಶುಪಾಲರಾದ ಡಾ.ಬಿ.ರಾಜಶೇಖರಪ್ಪ ದಿಕ್ಸೂಚಿ ಭಾಷಣ ಮಾಡಿ ಚಿತ್ರದುರ್ಗಕ್ಕೆ ವಿಶೇಷ, ಅಪರೂಪವಾದ ಸ್ಥಾನವಿದೆ. ಇಲ್ಲಿನ ಇತಿಹಾಸದ ಬಗ್ಗೆ ಜಗತ್ತಿನ ವಿಜ್ಞಾನಿಗಳು ಮಾತನಾಡಿದ್ದಾರೆ. ಜೀವದ ಉಗಮ ಮೊಟ್ಟ ಮೊದಲು ಆರಂಭವಾಗಿದ್ದು, ಚಿತ್ರದುರ್ಗದಲ್ಲಿ ಎಂದು ಅಮೇರಿಕಾದ ವಿಜ್ಞಾನಿ ಹೇಳಿದ್ದಾರೆ. ಅದಕ್ಕೆ ಇಲ್ಲಿನ ಬಂಡೆಗಳಲ್ಲಿ ಪಳೆಯುಳಿಕೆಯಿರುವುದು ಸಾಕ್ಷಿಯಾಗಬಹುದು ಎಂದರು.

ಪ್ರಾಚೀನ ಪರಂಪರೆಯುಳ್ಳ ಚಿತ್ರದುರ್ಗವನ್ನು ಶಾತವಾಹನರು, ಕದಂಬರು, ಚಾಲುಕ್ಯರು, ರಾಷ್ಟ್ರಕೂಟರು, ವಿಜಯನಗರದ ಅರಸರು ಆಳಿದ್ದಾರೆ. ಪಾಳೆಯಗಾರ ಎನ್ನುವ ಶಬ್ದ ಚರ್ಚೆಗೆ ಒಳಗಾಗಿದೆ. ಆಳ್ವಿಕೆ, ವಂಶವೃಕ್ಷಗಳ ಬಗ್ಗೆ ಅಭಿಪ್ರಾಯಗಳು ಪ್ರಕಟವಾಗಿವೆ. ನೈಜ ಇತಿಹಾಸ ಪ್ರಚಾರವಾಗುವುದು ಕಷ್ಟದ ಕೆಲಸ. ಆದರೂ ಆಗಬೇಕು. ತಿಮ್ಮಣ್ಣನಾಯಕನ ಆಳ್ವಿಕೆಯಿಲ್ಲದೆ ಚಿತ್ರದುರ್ಗದ ಪಾಳೆಯಪಟ್ಟು ಆರಂಭವಾಗಿಲ್ಲ. ಚರಿತ್ರೆ ಎಂದ ಮೇಲೆ ಸಮಸ್ಯೆ ಇದ್ದೇ ಇರುತ್ತದೆ. ಸಮಸ್ಯೆಯಿಲ್ಲದ ಚರಿತ್ರೆ ಯಾವುದೂ ಇಲ್ಲ ಎಂದು ಹೇಳಿದರು.ಡಾ.ಬಿ.ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಆಂಧ್ರಪ್ರದೇಶ ಅನಂತಪುರದ ಕೃಷ್ಣದೇವರಾಯ ವಿ.ವಿ.ಯ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಆರ್.ಶೇಷಶಾಸ್ತ್ರಿ, ಕರ್ನಾಟಕ ವಿ.ವಿ. ಧಾರವಾಡದ ಡಾ.ರು.ಮ.ಷಡಾಕ್ಷರಯ್ಯ, ಇತಿಹಾಸ ವಿಭಾಗ ದಾವಣಗೆರೆ ವಿ.ವಿ.ಯ ಪ್ರಾಧ್ಯಾಪಕ ಡಾ.ವೆಂಕಟರಾವ್ ಎಂ.ಪಲಾಟೆ, ಸ್ನಾತಕೋತ್ತರ ಇತಿಹಾಸ ವಿಭಾಗ ಮುಖ್ಯಸ್ಥ ಡಾ.ಆರ್.ಶಿವಪ್ಪ, ದಾವಣಗೆರೆ ವಿ.ವಿ. ಇತಿಹಾಸ ಅಧ್ಯಾಪಕರ ವೇದಿಕೆ ಅಧ್ಯಕ್ಷ ಪ್ರೊ.ಸಿ.ಜಗದೀಶ, ಐ.ಕ್ಯೂ.ಎ.ಸಿ.ಸಂಚಾಲಕಿ ಡಾ.ಆರ್.ತಾರಿಣಿಶುಭದಾಯಿನಿ, ಅಧ್ಯಾಪಕ ಸಂಘದ ಕಾರ್ಯದರ್ಶಿ ಡಾ.ಆರ್.ಗಂಗಾಧರ್, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಉಪ ನಿರ್ದೇಶಕ ಡಾ.ನೆಲ್ಕುದುರಿ ಸದಾನಂದ ವೇದಿಕೆಯಲ್ಲಿದ್ದರು.

# ಶ್ರವಣ ದೋಷ ಪರೀಕ್ಷಿಸುವ ಸುಲಭ ಸಾಧನ ಲಭ್ಯ

» **ಚಿತ್ರದುರ್ಗ**

ಶ್ರವಣ ದೋಷ ಪರೀಕ್ಷಿಸುವ ಸುಲಭ ಸಾಧನ ಲಭ್ಯವಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು. ನಗರದ ಜಿಲ್ಲಾ ಅರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಶಾ ಕಾರ್ಯಕರ್ತೆಯರು ಮತ್ತು ಸಮುದಾಯದವರಿಗೆ ಆಯೋಜಿಸಿದ್ದ ವಿಶ್ವ ಶ್ರವಣದೋಷ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಳಂಕವನ್ನು ಎದುರಿಸಲು, ಕಿವಿ ಮತ್ತು ಶ್ರವಣ ಆರೈಕೆಗೆ ಆದ್ಯತೆ ನೀಡಲು ವಿಶ್ವ ಶ್ರವಣ ದಿನ ಆಚರಿಸಲಾಗುತ್ತದೆ. ಕ್ಷೇತ್ರ ಮಟ್ಟದಲ್ಲಿ ತಾಯಂದಿರ ಸಭೆಗಳಲ್ಲಿ ಮತ್ತು ಸಾರ್ವಜನಿಕರಿಗೆ ಶ್ರವಣದೋಷ ನಿಯಂತ್ರಣ ಮತ್ತು ನಿವಾರಣೆ ಬಗ್ಗೆ ಮಾಹಿತಿ ನೀಡುವ ಮೂಲಕ ಶ್ರವಣದೋಷಕ್ಕೆ ಕಡಿವಾಣ ಹಾಕಬೇಕು ಎಂದು ಹೇಳಿದರು.

**"ಬದಲಾಗುತ್ತಿರುವ ಮನಸ್ಥಿತಿ:** ಕಿವಿ ಮತ್ತು ಶ್ರವಣ ಆರೈಕೆಯನ್ನು ಎಲ್ಲರಿಗೂ ವಾಸ್ತವವಾಗಿಸಲು ನಿಮ್ಮನ್ನು ಸಶಕ್ತಗೊಳಿಸಿಕೊಳ್ಳಿ" ಎಂಬುವುದು ಈ ಬಾರಿಯ



ಘೋಷಣೆಯಾಗಿದ್ದು, ಮನೆ ಭೇಟಿ ಸಂದರ್ಭದಲ್ಲಿ ತಾಯಂದಿರುಗಳಿಗೆ ಮಾಹಿತಿ ನೀಡಿ ಮಕ್ಕಳಲ್ಲಿ ಶ್ರವಣದೋಷ ಇರುವವರನ್ನು ಪತ್ತೆ ಹಚ್ಚಿ ವೈದ್ಯರಲ್ಲಿ ಪರೀಕ್ಷಿಸಲು ಸಲಹೆ ನೀಡಬೇಕು ಎಂದರು. ಕಿವಿ ಕೇಳಿಸದವರಿಗೆ ಕಿವಿಯೊಳಗೆ ಕಾಕ್ಲಿಯರ್ ಇಂಪ್ಲಾಂಟ್ ಅಳವಡಿಸಲಾಗುತ್ತಿದ್ದು, ಇದರ ಪ್ರಯೋಜನ ಪಡೆಯಬೇಕು ಎಂದು ಹೇಳಿದರು. ಜಿಲ್ಲಾಸ್ಪತ್ರೆಯ ಕಿವಿ, ಮೂಗು, ಗಂಟಲು ತಜ್ಞ ವೈದ್ಯ ಡಾ.ಸಿ.ಪಿ.ಮಲ್ಲಿಕಾರ್ಜುನ್ ಮಾತನಾಡಿ, ದೇಶದಲ್ಲಿ 63 ಮಿಲಿಯನ್ ಜನ ಕಿವಿಯ ತೊಂದರೆಗೆ ಒಳಗಾಗಿದ್ದಾರೆ. ನೂರಕ್ಕೂ ಹೆಚ್ಚು ಜನ ರೋಗಿಗಳಲ್ಲಿ 10 ರಿಂದ 20 ಜನ ಮಕ್ಕಳು ವೃದ್ಧರು ಶ್ರವಣದೋಷದವರಿದ್ದಾರೆ. ಕಿವಿಯ ತೊಂದರೆಗೆ ಕಿವಿಯೊಳಗೆ ಎಣ್ಣೆ ಕಾಯಿಸಿ ಬಿಡುವುದು, ಬೆಳ್ಳುಳ್ಳಿ ರಸ ಹಾಕುವುದು ಒಳಿತಲ್ಲ ಎಂದು ತಿಳಿಸಿದ ಅವರು, ಕಿವಿಗಳನ್ನು ಸೋಪು ನೀರಿನಿಂದ ತೊಳೆಯಬೇಡಿ. ಹುಟ್ಟಿದ ಎಲ್ಲಾ ಮಕ್ಕಳಿಗೂ ಕಿವಿ ಪರೀಕ್ಷೆ ಮಾಡಿಸಿ ಎಂದರು. ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ರೇಖಾ ಮಾತನಾಡಿ, ಕಿವುಡುತನ ಒಂದು ತಡೆಗಟ್ಟಬಹುದಾದ ಅಂಗವಿಕಲತೆಯಾಗಿದ್ದು, ಗರ್ಭಿಣಿ ತಾಯಂದಿರಿಗೂ ಸಹ ಸೂಕ್ತ ಪರೀಕ್ಷೆಗಳು ಅವಶ್ಯವಿದ್ದು, ಮಕ್ಕಳಿಗೆ ಶ್ರವಣದೋಷ ಬಾರದಂತೆ ತಡೆಯಬಹುದು. ಜಾಂಡಿಸ್ ಆದ ಮಕ್ಕಳಿಗೂ ಕೂಡ ಕಿವಿಯ ಪರೀಕ್ಷೆ ಅಗತ್ಯ. "ಮುಂಜಾಗ್ರತಾ ಕ್ರಮ ಅನುಸರಿಸಿ ಕಿವುಡುತನ ತಡೆಗಟ್ಟಿ" ಎಂದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿ ಮಠ ಮಾತನಾಡಿ, ಕಿವಿಗೆ ಸ್ವತಃ ಚಿಕಿತ್ಸೆ ಬೇಡ. ವೈದ್ಯರಲ್ಲಿ ಮಾತ್ರ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯಿರಿ. ಕಿವುಡುತನವನ್ನು ತಡೆಗಟ್ಟಿರಿ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್, ಎನ್‌ವಿಬಿಡಿಸಿಪಿ ಅಧಿಕಾರಿ ಡಾ.ಎನ್.ಕಾಶೀ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆಡಿಯೋ ಲಾಜಿಸ್ಟ್ ದಿವ್ಯ, ಆಡಿಯೋ ಮೆಟ್ರಿಕ್ ಅಸಿಸ್ಟೆಂಟ್ ಜನಾರ್ಧನ್, ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಸುರೇಶ್ ಬಾಬು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್, ಮಲ್ಲಿಕಾರ್ಜುನ್ ಇದ್ದರು.

## ಯುವ ಬರಹಗಾರರ ಶಿಬಿರ

» **ಮೊದಲ ಪುಟದಿಂದ**

ಇಂದಿನ ವಿದ್ಯಾರ್ಥಿ ಇಂದಿನ ಪ್ರಜೆ ಶೈಕ್ಷಣಿಕ ಪರಿವಾರದಲ್ಲಿ ಪರಿವರ್ತನೆಯ ಪ್ರಯತ್ನ ಪಕ್ಷದ ರಾಜಕಾರಣದಿಂದ ಮೇಲೇರಿ ರಾಷ್ಟ್ರ ರಾಜಕಾರಣದಲ್ಲಿ ಪಾಲ್ಗೊಳ್ಳುವ ರಾಷ್ಟ್ರ ಹಿತದ ರಾಜನೀತಿ ರಚನಾತ್ಮಕ ಆಂದೋಲನಾತ್ಮಕ ಪ್ರಾತಿನಿಧ್ಯಾತ್ಮಕ ಕಾರ್ಯ ಪದ್ಧತಿಯ ಮೂಲಕ ಪ್ರತಿಯೊಬ್ಬ ಕಾರ್ಯಕರ್ತರು ಸ್ವಾಮಿ ವಿವೇಕಾನಂದರು ಬಯಸಿದ ಯುವಶಕ್ತಿ ಆಗಬೇಕೆಂಬುದು ವಿದ್ಯಾರ್ಥಿ ಪರಿಷತ್ತಿನ ಆಶಯವಾಗಿದೆ ಎಂದರು. ಈ ಯುವ ಬರಹಗಾರರ ಶಿಬಿರವು 1983 ರಿಂದ ಚಿತ್ರದುರ್ಗದಲ್ಲಿ ಪ್ರಾರಂಭಗೊಂಡು 2010ರವರೆಗೂ ಹಲವಾರು ಆವೃತ್ತಿಗಳಲ್ಲಿ ನಾಡಿನ ಯುವ ಬರಹಗಾರರಿಗೆ ಸ್ಫೂರ್ತಿಯ ಚಿಲುಮೆಯಂತೆ ಪ್ರೇರಣೆ ನೀಡಿದ ಹೆಗ್ಗಳಿಕೆ ಇದೆ.ಇಂದಿನ ಯುವ ವಿದ್ಯಾರ್ಥಿ ಬರಹಗಾರರನ್ನು ಬರವಣಿಗೆ ಮತ್ತು ಓದಿಗೆ ಪ್ರೋತ್ಸಾಹಿಸಿ ಮಾರ್ಗದರ್ಶನ ನೀಡುವ, ರಾಷ್ಟ್ರೀಯ ಚಿಂತನೆಗಳನ್ನು ಒಳಗೊಳ್ಳುವ, ಸಾಮಾಜಿಕ ಸಂವೇದನಾಶೀಲ ಬರಹಗಾರರನ್ನಾಗಿ ರೂಪಿಸುವ ದೃಷ್ಟಿಯಿಂದ ಈ ಬರಹಗಾರರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.ಈ ಶಿಬಿರದಲ್ಲಿ ಕಾದಂಬರಿ ಬಿತ್ತಿ ಚಿತ್ರ ರಚನೆ- ಲೋಕೇಶ್ ಅಗಸನಕಟ್ಟೆ ರವರು, ಸಣ್ಣ ಕಥೆಗಳ ಬರವಣಿಗೆ; ವ್ಯಾಕರಣ - ಶ್ರೀ ಆರ್. ಸತ್ಯನಾರಾಯಣ ಚಿಕ್ಕಮಗಳೂರು, ಕಾವ್ಯ-ವಸ್ತು ಸಂವೇದನೆ - ಡಾ. ಬಿ.ವಿ ವಸಂತ್ ಕುಮಾರ ರವರು, ಪತ್ರಿಕೋದ್ಯಮ ಬೆಳವಣಿಗೆ - ಪದ್ಮನಾಭ ತುಮಕೂರು, ಸಾಮರಸ್ಯ - ಯುವ ಬರಹಗಾರರ ಕುರಿತಾಗಿ ಶ್ರೀ ವಾದಿರಾಜ ರವರು, ಮೈಕ್ರೋ ಬ್ಲಾಗಿಂಗ್- ಬೇಳೂರು ಸುದರ್ಶನ್ ರವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ ಹಾಗೂ ಕವಿಗೋಷ್ಠಿ ಸೇರಿದಂತೆ ಹಲವಾರು ವಿಚಾರಮಹಿ ಅವಧಿಗಳಿರುತ್ತವೆ. ಈ ಶಿಬಿರದ ಉದ್ಘಾಟನಾ ಕಾರ್ಯಕ್ರಮ 2025ನೇ ಮಾರ್ಚ್ 07 ರಂದು ಸಂಜೆ 4:00ಕ್ಕೆ ಜರುಗಲಿದೆ. ಈ ಶಿಬಿರದ ಉದ್ಘಾಟಕರಾಗಿ ಕಾದಂಬರಿಕಾರರಾದ ಡಾ. ಗಜಾನನ ಶರ್ಮಾರವರು ಭಾಗವಹಿಸಲಿದ್ದಾರೆ.ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯಾದ್ಯಂತದಿಂದ 75 ಹೆಚ್ಚು ಅಪೇಕ್ಷಿತ ವಿದ್ಯಾರ್ಥಿ ಬರಹಗಾರರು ಭಾಗವಹಿಸಲಿದ್ದಾರೆ. ಗೋಷ್ಠಿಯಲ್ಲಿ ವಿಭಾಗ ಸಂಚಾಲಕರಾದ ಗೋಪಿ, ಚಿತ್ರದುರ್ಗ ಜಿಲ್ಲಾ ಸಂಚಾಲಕ್ ಕನಕರಾಜ್, ಕೋಡಿಹಳ್ಳಿ. ರಾಜ್ಯ ಕಾರ್ಯಕಾರಿ ಸದಸ್ಯೆ ಚಂದ್ರಕಲಾ, ನಗರ ಕಾರ್ಯದರ್ಶಿ ರಾಜು ಹೊನ್ನಮರಡಿ. ಉಪಸ್ಥಿತರಿದ್ದರು

## ಪ್ರಮುಖ ಸುದ್ದಿ

### ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಅಧ್ಯಯನ ತಂಡ ಬೇಟಿ

# ಅತ್ತ ಬಿರುಬಿಸಿಲಿನ ಹೊಡೆತ: ಇತ್ತ ಬೆಂಕಿ ಅನಾಹುತ

» **ಚಿತ್ರದುರ್ಗ**

ನಮ್ಮಲ್ಲಿ ಆಕಸ್ಮಿಕ ಕಾಡಿನ ಬೆಂಕಿ ಪ್ರಮಾಣ ಶೇ.1ರಷ್ಟಿದ್ದರೆ ಮಾನವನ ಹೊಟ್ಟೆಯುರಿಗೆ ಶೇ.99ರಷ್ಟು ಅರಣ್ಯ ಬೆಂದು ಹೋಗುತ್ತಿರುವುದು ಬಹಿರಂಗ ಸತ್ಯ. ಹಚ್ಚೋರು ಹಚ್ಚಿ ಸುಮ್ಮನಿದ್ದು ಬಿಡುತ್ತಾರೆ. ಕಾಡಿನೊಳಗೆ ಇರುವ ಪ್ರಾಣಿ, ಪಕ್ಷಿ, ಜೀವ ವೈವಿಧ್ಯಗಳು ಮತ್ತು ಮರಗಳು ಬೆಂಕಿಗೆ ಹಾನಿಯಾಗುತ್ತವೆ ಎಂದು ಚಿತ್ರದುರ್ಗ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ ಆತಂಕ ವ್ಯಕ್ತಪಡಿಸಿದರು.

ಚಿತ್ರದುರ್ಗದ ಹತ್ತಿರದಲ್ಲಿರುವ ಹುಲಿದೋಣಿ ಬೆಟ್ಟದಲ್ಲಿ ಕಿಡಿಗೇಡಿಗಳು ಬೆಂಕಿ ಹಚ್ಚಿರುವ ಕಾರಣ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಪದಾಧಿಕಾರಿಗಳು ಅದರ ವೀಕ್ಷಣೆ ಮತ್ತು ಅಪಾಯದ ಹಿನ್ನೆಲೆಯನ್ನ ಅಧ್ಯಯನ ಮಾಡುವ ಕೆಲಸವನ್ನು ಮಾಡಿದರು. ಹುಲಿದೋಣಿ ಬೆಟ್ಟಗಳ ತಪ್ಪಲಿನಲ್ಲಿ ಸಂಭವಿಸಿದ್ದ ಬೆಂಕಿ ಅವಗಡದ ಕುರಿತು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಸಂಚಾಲಕರಾದ ಟಿ.ರುದ್ರಮುನಿ ಅವರು ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನದ ತಂಡದೊಂದಿಗೆ ಅಧಿಕಾರಿಗಳ ಗಮನಕ್ಕೆ ಬೆಂಕಿ ದುರಂತದ ಬಗ್ಗೆ ಚರ್ಚೆ ಮಾಡಿದ್ದರು. ಈ ವೇಳೆ ಚಿತ್ರದುರ್ಗ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ ಆತಂಕ ವ್ಯಕ್ತಪಡಿಸಿದರು.



ಮಾರ್ಚ ತಿಂಗಳಿನಲ್ಲಿ ದಿನೆದಿನೇ ಬಿಸಿಲಿನ ತಾಪಮಾನ ಹೆಚ್ಚಿದ್ದು ಹಲವಾರು ಪ್ರಾಣಿ ಪಕ್ಷಿಗಳಿಗೆ ತಿನ್ನಲು ಆಹಾರ ವಿಲ್ಲದಂತಾಗಿರುವ ಈ ಸಂದರ್ಭದಲ್ಲಿ ಪಕ್ಷಿಗಳಿಗೆ ಗುಡ್ಡದಲ್ಲಿರುವ ಚಿಕ್ಕ ಚಿಕ್ಕ ಕೀಟಗಳು ಆಹಾರವಾಗುತ್ತದೆ ಮತ್ತು ಮುಂಗುಸಿ ಹಾವುಗಳಂತ ಪ್ರಾಣಿಗಳಿಗೆ ಕೀಟಗಳು ಆಹಾರವಾಗುತ್ತದೆ ಈ ರೀತಿ ಗುಡ್ಡಕ್ಕೆ ಬೆಂಕಿ ಹಚ್ಚುವುದರಿಂದ ಲಕ್ಷಾಂತರ ಕೀಟಗಳು ಸತ್ತು ಹೋಗುವ ಪರಿಣಾಮ ಹಲವಾರು ಪ್ರಾಣಿಗಳಿಗೆ ಆಹಾರದ ಕೊರತೆ ಉಂಟಾಗುತ್ತದೆ ಎಂದು ಮಾರ್ಚ್ 3ರಂದು ವನ್ಯಜೀವಿ ದಿನದಿಂದ ಆರಂಭ ಮಾಡಿದ ಸಂಚಾರ 6 ರವರೆಗೆ ಸುತ್ತಿದ ಅಧ್ಯಯನ ತಂಡ ಅರಣ್ಯ ಅಧಿಕಾರಿಗಳಿಗೆ ಮಾಹಿತಿ ನೀಡಿದೆ ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನವು ಕಳೆದ ಬಾರಿ ಸರ್ಕಾರಕ್ಕೆ ಪತ್ರ ಬರೆದಿತ್ತು. ಈ ರೀತಿಯ ದುರ್ಘಟನೆಗಳು ನಡೆಯದಂತೆ ಪದಾಧಿಕಾರಿಗಳು ಚರ್ಚೆ ಮಾಡಿದಾಗ ಜಂಟಿಯಾಗಿ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ವತಿಯಿಂದ ಸ್ಥಳ ಪರಿಶೀಲನೆ ನಡೆಸಲಾಯಿತು ಮತ್ತು ಮುಂದಿನ ದಿನದಲ್ಲಿ ಅರಣ್ಯ ಇಲಾಖೆ ಸಹಯೋಗದೊಂದಿಗೆ ಈ ಪ್ರದೇಶದ ಸುರಕ್ಷಿತ ವ್ಯವಸ್ಥೆಗೆ ತಡೆ ನಿರ್ಮಿಸಲು ಸಂಬಂಧಪಟ್ಟ ಇಲಾಖೆಗೆ ತಿಳಿಸಬೇಕೆಂದು ವೀಕ್ಷಣೆಯ ತಂಡ ತೀರ್ಮಾನಿಸಿತು.

ಬೇಸಿಗೆ ಬಂತೆಂದರೆ ಕಾಡಿನ ಬೆಂಕಿ ಪ್ರಮಾಣ ಅಧಿಕವಾಗುತ್ತಾ ಹೋಗುತ್ತದೆ. ಒಣಗಿ ಮಳೆಗೆ ಕಾದು ನಿಂತ ಮುಗಿಲೆತ್ತರದ ಮರಗಳು, ಕುರುಚಲು ಅರಣ್ಯ ಪ್ರದೇಶಗಳು ಬೆಂಕಿಗೆ ಆಹುತಿಯಾಗುತ್ತವೆ. ಅಷ್ಟೇ ಅಲ್ಲ ಅರಣ್ಯವನ್ನು ಉಳಿಸುವ ಪ್ರಾಣಿಗಳಿಂದ ಹಿಡಿದು ಸಣ್ಣ ಸಣ್ಣ ಪ್ರಾಣಿ, ಪಕ್ಷಿಗಳು ಕಾಡಿನ ಬೆಂಕಿಯಲ್ಲಿ ಸುಟ್ಟು ಕರಕಲಾಗುತ್ತವೆ. ಅದೆಷ್ಟೋ ಸೂಕ್ಷ್ಮ ಜೀವಿಗಳು ಅಳಿದು ಹೋಗುತ್ತವೆ. ಮರ, ಗಿಡಗಳ ಲೆಕ್ಕವೇ ಇಲ್ಲ ಎಲ್ಲವೂ ಸುಟ್ಟು ಹೋಗುತ್ತದೆ. ಇದೀಗ ಅದನ್ನು ತಡೆಯಲು ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನವು ಗುಡ್ಡಗಳನ್ನು ಹಸಿರು ವನವನ್ನಾಗಿ ಮಾಡಲು ಸನ್ನದ್ಧವಾಗಿದೆ.

"ಪರಿಸರ ಮತ್ತು ವನ್ಯಜೀವಿ ಸಂರಕ್ಷಣೆ, ಜಲ ಸಂರಕ್ಷಣೆ ನಮ್ಮೆಲ್ಲರ ಹೊಣೆ" ಎಂಬ ಧ್ಯೇಯದೊಂದಿಗೆ ನಡೆದ ಅಧ್ಯಯನದಲ್ಲಿ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್, ಸಂಚಾಲಕರಾದ ಟಿ. ರುದ್ರಮುನಿ, ಜಲ ಜಾಗೃತಿ ಉಪಾಧ್ಯಕ್ಷರಾದ ಕೆ. ಓಂಕಾರಪ್ಪ ಮತ್ತು ನಿರ್ದೇಶಕ ಅಜಯ್ ಕುಮಾರ್ ಮತ್ತು ಪದಾಧಿಕಾರಿಗಳು ಗುಡ್ಡಗಾಡು ಅಲೆದಾಡಿ ಮಾಹಿತಿ ಕಲೆ ಹಾಕಿದರು. ಸಿದ್ದಾರ್ಥ ಬಡಾವಣೆಯ ಸಮೀಪದ ಈ ಗುಡ್ಡದಲ್ಲಿ ಕರಡಿ ಮತ್ತು ಚಿರತೆಗಳು ವಾಸಿಸುತ್ತಿದ್ದವು. ಸಮೀಪದಲ್ಲಿ ಹುಲಿದೋಣಿ ಸಂಗಮೇಶ್ವರ ದೇಗುಲವಿದೆ. ಒಂದು ಸುತ್ತು ಹಾಕಿದ ತಂಡಕ್ಕೆ ಅಲ್ಲಿ ಬೆಂಕಿ ಹಾಕಿದ್ದು ಮತ್ತು ಕೆಲವು ಪುಂಡ ಯುವಕರು ಮದ್ಯಪಾನ ಮಾಡಿದ ಬಾಟಲ್‌ಗಳು ಸಿಕ್ಕವು. ಕೂಡಲೇ ಅರಣ್ಯಗಳ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಲಾಯಿತು.

ಸಂಪರ್ಕ: ರುದ್ರಮುನಿ 9448566054 ರಾಜ್ಯ ಸಂಚಾಲಕರು

## ಫಾಸ್ಟ್ ನ್ಯೂಸ್

### ನಗರದ ವಿವಿಧೆಡೆಗೆ ನಗರ ಸಾರಿಗೆ ಸೌಲಭ್ಯ

» ದಾವಣಗೆರೆ

ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಸೂಚನೆಯಂತೆ ಮಾರ್ಚ್ 3 ರಿಂದ ಬೆಳಗ್ಗೆ 7 ರಿಂದ ಸಂಜೆ 4.30 ರವರೆಗೆ ನಗರ ವ್ಯಾಪ್ತಿಯ ರೈಲ್ವೆ ಸ್ಟೇಷನ್, ಗುಂಡಿ ಸರ್ಕಲ್, ಲಕ್ಷ್ಮೀ ಫ್ಲೋರ್‌ಮಿಲ್, ಶಾರದಾಮಂದಿರ, ಎಸ್.ಎಸ್.ಬಡಾವಣೆ, ಕುಂದವಾಡಕೆರೆ ಮುಖಾಂತರ ಬಾಲಾಜಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಅಕ್ತರ್‌ರಜ್ಹಾ ವೃತ್ತದವರೆಗೆ ನಗರ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ದಾವಣಗೆರೆ ಕೆ.ಎಸ್. ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದೇಶ್ವರ್ ಎನ್. ಹೆಬ್ಬಾಳ್ ತಿಳಿಸಿದ್ದಾರೆ.

### ಕೊಳಚೆ ಪ್ರದೇಶದ ಗ್ರಂಥಾಲಯ ಸ್ಥಳಾಂತರ

» ದಾವಣಗೆರೆ

ಜಿಲ್ಲಾ ಕೇಂದ್ರ ಗ್ರಂಥಾಲಯ, ನಗರ ವ್ಯಾಪ್ತಿಯ 19 ನೇ ವಾರ್ಡ್‌ನ ಶೇಖರಪ್ಪ ನಗರದಲ್ಲಿ ಕೊಳಚೆ ಪ್ರದೇಶದ ಗ್ರಂಥಾಲಯವನ್ನು ಮಹಾನಗರಪಾಲಿಕೆ ವತಿಯಿಂದ 14 ನೇ ವಾರ್ಡ್‌ನ ಉದ್ಯಾನವದ ಆವರಣದ ಗ್ರಂಥಾಲಯಕ್ಕಾಗಿ ನಿರ್ಮಿಸಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಕೊಳಚೆ ಪ್ರದೇಶದ ಗ್ರಂಥಾಲಯವನ್ನು ತಾತ್ಕಾಲಿಕವಾಗಿ ವಾರ್ಡ್.ಸಂ 19 ರಿಂದ 14 ಕ್ಕೆ ಸ್ಥಳಾಂತರಿಸಲಾಗುವುದು. ಇದರ ಬಗ್ಗೆ ಸಾರ್ವಜನಿಕ ಓದುಗರು ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ 7 ದಿನಗಳೊಳಗೆ ಮುಖ್ಯ ಗ್ರಂಥಾಲಯಾಧಿಕಾರಿ, ಜಿಲ್ಲಾ ಕೇಂದ್ರ ಗ್ರಂಥಾಲಯ, ಎಸ್.ನಿಜಲಿಂಗಪ್ಪ ಬಡಾವಣೆ ಕಚೇರಿಗೆ ನಿಖರ ವಿಳಾಸದೊಂದಿಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದೆಂದು ಮುಖ್ಯ ಗ್ರಂಥಾಲಯಾಧಿಕಾರಿ ತಿಳಿಸಿದ್ದಾರೆ.

### ಜೂಜಾಟ ಮೂವರ ವಶ

» ಚಳ್ಳಕೆರೆ

ತಾಲ್ಲೂಕಿನ ವೀರದಿಮ್ಮನಹಳ್ಳಿ ಆಟೋಸ್ಟಾಂಡ್ ಹಿಂಭಾಗದಲ್ಲಿ ಸಂಜೆ ಸಾರ್ವಜನಿಕರನ್ನು ಸೇರಿಸಿಕೊಂಡು ಜೂಜಾಟವಾಡುತ್ತಿದ್ದ ಅದೇ ಗ್ರಾಮದ ರಾಜಾನಾಯ್ಕ, ರಂಗನಾಯ್ಕ ಮತ್ತು ಪಾಪಾನಾಯ್ಕರವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 4120ರೂ ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಕೋಳಿಶೀತಜ್ವರದಿಂದ ಕೋಳಿ, ಪಕ್ಷಿಗಳು ಮರಣಹೊಂದಿದಲ್ಲಿ ಸಹಾಯವಾಣಿಗೆ ಕರೆಮಾಡಿ

» ದಾವಣಗೆರೆ

ರಾಜ್ಯದಲ್ಲಿ ಇತ್ತೀಚೆಗೆ ಕೋಳಿ ಶೀತ ಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ, ಈ ರೋಗವನ್ನು ತಡೆಗಟ್ಟುವ ಮತ್ತು ನಿಯಂತ್ರಿಸುವ ಸಲುವಾಗಿ ಸಾರ್ವಜನಿಕರು ಈ ರೋಗಕ್ಕೆ ಸಂಬಂಧಿಸಿದಂತೆ, ಯಾವುದೇ ಮಾಹಿತಿ ಕಂಡುಬಂದರೆ ಅಂದರೆ, ಶಂಕಾಸ್ಪದವಾಗಿ ಸತ್ತ ಹಿತ್ತಲ ಕೋಳಿಗಳು, ವನ್ಯ ಪಕ್ಷಿಗಳ ಮಾಹಿತಿಯನ್ನು ಕೂಡಲೇ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ದೂ.ಸಂಖ್ಯೆ 9916860163 ಗೆ ಕರೆಮಾಡಿ ಮಾಹಿತಿ ನೀಡುವಂತೆ ಇಲಾಖೆಯ ಉಪನಿರ್ದೇಶಕರಾದ ಡಾ; ಮಹೇಶ್ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಕಂಬತನಹಳ್ಳಿ ಗ್ರಾಮದ ಸಚ್ಚಿನ್ ಬಿನ್ ತಿಮ್ಮಪ್ಪ 30 ವರ್ಷ, ಇವರು ಕಳೆದ ಫೆ.27 ರಂದು ಬೆಳಿಗ್ಗೆ 9 ಗಂಟೆಗೆ ಬ್ಯಾಂಕ್ ಸಾಲವನ್ನು ಕಟ್ಟಲು ಸಾಧ್ಯವಿಲ್ಲ ಎಂದು ಪತ್ರ ಬರೆದು ಮನೆಯಿಂದ ಹೋದವರು ಇದೂವರೆಗೂ ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ; 6 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ಕನ್ನಡ ಓದಲು ಬರುತ್ತದೆ. ಪ್ಯಾಂಟ್ ಶರ್ಟ್ ಧರಿಸಿರುತ್ತಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಬಡಾವಣೆ ಪೊಲೀಸ್ ಠಾಣೆಯ ದೂ.ಸಂ: 253100, 268758, 9480803259, 272018, 262550 ಗೆ ಮಾಹಿತಿ ನೀಡುವಂತೆ ಮಲೇಬೆನ್ನೂರು ಠಾಣಾಧಿಕಾರಿ ತಿಳಿಸಿದ್ದಾರೆ.

### ಮಹಿಳೆ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಹೊಳೆಸಿರಿಗೆರೆ ಗ್ರಾಮದ ಪ್ರತಿಭಾ.ಬಿ.ಎಸ್ ಬಿನ್ ಬಿ.ಶಿವನಗೌಡ 18 ವರ್ಷ 5 ತಿಂಗಳು, ಇವರು ಕಳೆದ ಫೆ.28 ರಂದು ಪರೀಕ್ಷೆಯ ಹಾಲ್‌ಟಿಕೆಟ್ ತೆಗೆದುಕೊಂಡು ಬರುತ್ತೇನೆ ಎಂದು ಹೋದವರು ಇದೂವರೆಗೂ ವಾಪಾಸ್ ಬಂದಿರುವುದಿಲ್ಲ.
**ಚಹರೆ ವಿವರ;** 4.10 ಅಡಿ, ಕೋಲು ಮುಖ, ಕೆಂಪು ಮೈಬಣ್ಣ, ಕನ್ನಡ ಓದಲು ಬರುತ್ತದೆ, ಟಾಪ್ ಮತ್ತು ಲೆಗ್ಗಿನ್ಸ್ ಧರಿಸಿರುತ್ತಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಬಡಾವಣೆ ಪೊಲೀಸ್ ಠಾಣೆಯ ದೂ.ಸಂ: 253100, 268758, 9480803234, 272018, 262550 ಗೆ ಮಾಹಿತಿ ನೀಡುವಂತೆ ಮಲೇಬೆನ್ನೂರು ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

# ಅನುದಾನದ ಶ್ವೇತಪತ್ರ ಹೊರಡಿಸಿ: ಕಾರಜೋಳ

» ಚಿತ್ರದುರ್ಗ



ಯುಪಿಎ ಸರ್ಕಾರದ ಅವಧಿಯಲ್ಲಿ ರಾಜ್ಯಕ್ಕೆ ಎಷ್ಟು ಅನುದಾನ ನೀಡಿದ್ದರು, ಬಿಜೆಪಿ ಸರ್ಕಾರದಲ್ಲಿ ಕಳೆದ 10 ವರ್ಷದಲ್ಲಿ ರಾಜ್ಯಕ್ಕೆ ಎಷ್ಟು ಅನುದಾನ ಬಂದಿದೆ ಎಂಬುದರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಶ್ವೇತಾ ಪತ್ರ ಹೊರಡಿಸಲಿ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಗೋವಿಂದ ಕಾರಜೋಳ ರವರು ಆಗ್ರಹಿಸಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ವರ್ಗಗಳ ಅಭಿವೃದ್ಧಿಗೆ ಮೀಸಲಿಟ್ಟ ಎಸ್‌ಸಿಪಿ ಮತ್ತು ಟಿ ಎಸ್ ಪಿ ಹಣ ಗ್ಯಾರಂಟಿ ಯೋಜನೆಗೆ ವರ್ಗಾವಣೆ ಮಾಡಿರುವ ಕ್ರಮ ಖಂಡಿಸಿ ಚಿತ್ರದುರ್ಗದಲ್ಲಿ ಬಿಜೆಪಿಯಿಂದ ಏರ್ಪಡಿಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದ ಅವರು ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಸದರು. ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಈಗಾಗಲೇ ಎರಡು ವರ್ಷ ಆಗಿದೆ.. ಈ ಎರಡು ವರ್ಷದಲ್ಲಿ ಎಸ್.ಸಿ.ಎಸ್.ಪಿ.ಟಿ.ಎಸ್. ಪಿ ಯೋಜನೆಯ 26426 ಕೋಟಿ ರೂ ಎಸ್.ಸಿ/ಎಸ್.ಟಿ ಸಮುದಾಯದ ಅನುದಾನವನ್ನು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ದುರುಪಯೋಗ ಪಡಿಸಿಕೊಂಡಿದೆ.ಸಂವಿಧಾನದ ಆಶಯ ಏನು.. ಎಸ್.ಸಿ.ಎಸ್.ಪಿ.ಟಿ.ಎಸ್. ಪಿ ಯೋಜನೆಯ ಎಸ್.ಸಿ/ ಎಸ್.ಟಿ ಸಮುದಾಯದ ಆಶಯ ಏನು.. ಎಂಬುದನ್ನು ಮರೆತ್ತಿದ್ದಾರೆ. ಎಸ್.ಸಿ.ಎಸ್.ಪಿ.ಟಿ.ಎಸ್. ಪಿ ಅನುದಾನವನ್ನು ಎಸ್.ಸಿ/ಎಸ್.ಟಿ ಸಮುದಾಯಗಳ ಶಿಕ್ಷಣಕ್ಕೆ, ಮನೆಗಳನ್ನು ಕಟ್ಟಿಕೊಳ್ಳಲಿಕ್ಕೆ, ಕೃಷಿ ಜಮೀನುಗಳಿಗೆ ನೀರಾವರಿ ವನ್ನು ಒದಗಿಸಲಿಕ್ಕೆ ಉಪಯೋಗ ಮಾಡಬೇಕು ಆದರೆ ಸಿದ್ದರಾಮಯ್ಯರವರು ಈ ಹಣವನ್ನು ದುರುಪಯೋಗ ಮಾಡಿಕೊಂಡು ಚುನಾವಣೆಗೆಬಳಸಿಕೊಂಡಿದ್ದಾರೆಎಂದರು. ಈ ಅನುದಾನದ ದುರುಪಯೋಗ ವಿಚಾರವಾಗಿ ಪ್ರತಿಭಟನೆಯನ್ನು ಮಾಡಲಾಯಿತು ಮನವಿಯನ್ನು ಸಲ್ಲಿಸಲಾಯಿತು ಆದರೆ ಸಿದ್ದರಾಮಯ್ಯ ರವರು ಯಾವುದಕ್ಕೂ ಕೊಡ ಬಗ್ಗುತ್ತಿಲ್ಲ. ಇದರ ವಿರುದ್ಧವಾಗಿ ರಾಜ್ಯಾದ್ಯಂತ ಉಗ್ರವಾದ ಹೋರಾಟ ಮಾಡುವ ಮಾಡುವ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುತ್ತಿದೆ. ನಾಳೆ 4 ಲಕ್ಷ ಕೋಟಿ ಬಜೆಟ್ ಮಾಡುತ್ತೇವೆ ಅಂತ ಸಿದ್ದರಾಮಯ್ಯನವರು ಹೇಳುತ್ತಾರೆ. ಈ ಬಜೆಟ್‌ನಲ್ಲಿ ಎಸ್.ಸಿ.ಎಸ್.ಪಿ.ಟಿ.ಎಸ್.ಪಿಯೋಜನೆಗೆ ಹಣವನ್ನು ಒದಗಿಸಬೇಕು ಹಾಗೆಯೇ ಈ ಹಿಂದೆ ಬಳಸಿಕೊಂಡಿರುವ 26426 ಕೋಟಿ ರೂ ಗಳನ್ನು ಸಹ ವಾಪಸ್ ನೀಡಬೇಕೆಂದು ಆಗ್ರಹಿಸಿ ರಾಜ್ಯದಲ್ಲಿ ಸಿದ್ದರಾಮಯ್ಯರವರ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಒಂದೇ ಒಂದು ಪೈಸೆ ಅಭಿವೃದ್ಧಿ ಕಾರ್ಯ ನಡೆದಿಲ್ಲ.. ಯಾವುದೇ ಕಾಮಗಾರಿಗಳು ಸಹ ನಡೆಯುತ್ತಿಲ್ಲ.ಗುತ್ತಿಗೆದಾರರು ಬಿಲ್ ಮರುಪಾವತಿ ಆಗುತ್ತಿಲ್ಲವೆಂದು ಆರೋಪಿಸಿ ರಾಜ್ಯಪಾಲರಿಗೆ ಮನವಿ ಪತ್ರವನ್ನು ಸಹ ಸಲ್ಲಿಸಿದ್ದಾರೆ.ಇದೊಂದು ಅಸಮರ್ಥ ಸರ್ಕಾರ.. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ... ಕಾನೂನು ಸರಿಯಾಗಿ ಪಾಲನೆ ಆಗುತ್ತಿಲ್ಲ ಎಂದು ಸಂಸದರು ಆರೋಪಿಸಿ 2018 ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರವನ್ನು ಕಳೆದುಕೊಂಡಾಗ 30 ಸಾವಿರ ಕೋಟಿ ರೂಗಳ ಯೋಜನೆಗಳಿಗೆ ಟೆಂಡರ್ ಕರೆದು ಬಿಟ್ಟು ಹೋಗಿದ್ದರ ಬಗ್ಗೆ ಶ್ವೇತಪತ್ರ ಹೊರಡಿಸಲಿ ಎಂದು ಆಗ್ರಹಿಸಿದರು.

ರಾಜ್ಯದಲ್ಲಿ 56 ಜನ ಮಹಿಳೆಯರ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ... ಗುತ್ತಿಗೆದಾರರು ಬಿಲ್ ಪಾವತಿ ಆಗದೇ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ.ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ.. 10 ಜನ ಅಧಿಕಾರಿಗಳು ಭ್ರಷ್ಟಾಚಾರಕ್ಕೆ ಹಣ ನೀಡದೇ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.33 ಜನ ಮೈಕ್ರೋ ಫೈನಾನ್ಸ್ ನಲ್ಲಿ ಸಾಲ ಮಾಡಿ ಮೈಕ್ರೋ ಫೈನಾನ್ಸ್ ನವರ ಕಿರುಕುಳಕ್ಕೆ ಹೆದರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯದಲ್ಲಿ 700 ಬಾಣಂತಿಯರು ಸರ್ಕಾರಿ ಆಸ್ಪತ್ರೆಯಲ್ಲಿ ಸರಿಯಾದ ಚಿಕಿತ್ಸೆ ಸಿಗದೇ ಮೃತಪಟ್ಟಿದ್ದಾರೆ.1400 ನವಜಾತ ಶಿಶುಗಳು ಮೃತಪಟ್ಟಿವೆ..ರಾಜ್ಯದಲ್ಲಿ ಬೆಲೆ ಏರಿಕೆ, ವಿದ್ಯುತ್ ದರ ಏರಿಕೆ, ನೀರಿನ ದರ ಏರಿಕೆ, ಹಾಲಿನ ದರ ಏರಿಕೆ ಹಾಗೂ ದಿನನಿತ್ಯ ವಸ್ತುಗಳ ಬೆಲೆ ಗಗನಕ್ಕೆ ಏರಿವೆ.ರಾಜ್ಯ ಸರ್ಕಾರದ ದುರಾಡಳಿತ ಹಾಗೂ ಭ್ರಷ್ಟಾಚಾರದ ವಿರುದ್ಧ ಇಂದು ಸಾಂಕೇತಿಕವಾಗಿ ಪ್ರತಿಭಟನೆಯನ್ನು ನಡೆಸಲಿದ್ದೇವೆ.ಇದಕ್ಕೆ ಸರ್ಕಾರ ಬಗ್ಗದೇ ಇದ್ದರೆ ಎಸ್.ಸಿ.ಎಸ್.ಪಿ.ಟಿ.ಎಸ್. ಪಿ ಯೋಜನೆಯಹಣವನ್ನುವಾಪಸ್‌ನೀಡದೇ ಇದ್ದರೆ ರಾಜ್ಯಾದ್ಯಂತ ಆಂದೋಲನವನ್ನು ನಡೆಸಲಿದ್ದೇವೆ ಎಂದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಬುಡಕಟ್ಟು ಜನಾಂಗ, ಅಲೆಮಾರಿ, ಅರೆಅಲೆಮಾರಿಗಳ ಅಭ್ಯುದಯಕ್ಕಾಗಿ ಮೀಸಲಿಟ್ಟಿರುವ ಹಣವನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಕ್ಕಾಗಿ ಬಳಸುತ್ತಿರುವುದು ಅಕ್ಷಮ್ಯ ಅಪರಾಧ. ಹಾಗಾಗಿ ಈ ಬಾರಿಯ ಬಜೆಟ್‌ನಲ್ಲಿ ಎಸ್ಸಿಪಿ. ಟಿ.ಎಸ್ಪಿ. ಹಣವನ್ನು ಬೇರೆ ಉದ್ದೇಶಗಳಿಗೆ ಬಳಸುವುದಿಲ್ಲವೆಂದು ನಿರ್ಣಯ ಕೈಗೊಳ್ಳುವಂತೆ ಒತ್ತಾಯಿಸಿದರು.

ಈ ಪತ್ರಿಕಾ ಗೋಷ್ಠಿಯಲ್ಲಿ ರಾಜ್ಯ ಬಿಜೆಪಿ.ಕಾರ್ಯದರ್ಶಿಗಳಾದ ಅಂಬಿಕಾ ಹುಲಿನಾಯ್ಕರ್ ಮಾಜಿ ಶಾಸಕರಾದ ಎಸ್.ಕೆ.ಬಸವರಾಜನ್, ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್ ಖಂಜಾಚಿ ಮಾಧುರಿ ಗೀರಿಶ್, ರೈತ ಮೋರ್ಚಾದ ವೆಂಕಟೇಶ್ ಯಾದವ್, ಸೋಮುನಾಥ್, ಮೋಹನ್, ಯೋಗಿಶ್ ಸಹ್ಯಾದ್ರಿ,ಹನುಮಂತಪ್ಪ, ಎಸ್ಸಿ. ಮೋರ್ಚಾ ಹನುಮಂತಪ್ಪ ಓಬಲೇಶ್, ಓ.ಬಿ.ಸಿ.ಮೋರ್ಚಾದ ನರೇಂದ್ರ ರಂಗಪ್ಪ, ಎಸ್ಸಿ ಮೋರ್ಚಾ ಶಿವಣ್ಣ, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಬೇದ್ರೆ ನಾಗರಾಜ್, ಛಲವಾದಿ ತಿಪ್ಪೇಸ್ವಾಮಿ, ಜಯಪಾಲಯ್ಯ, ಕುಮಾರಸ್ವಾಮಿ, ರಾಮದಾಸ್, ಶಿವಣ್ಣ, ತಿಪ್ಪೇಸ್ವಾಮಿ, ರಘುಮೂರ್ತಿ, ಬಸಮ್ಮ, ಕಾಂಚನಾ, ಅಂಬಿಕಾ ಶಂಭೂ, ಲೋಕೇಶ್ ನಾಗರಾಜ್ ಭಾಗವಹಿಸಿದ್ದರು.

# ಸಣ್ಣಕೈಗಾರಿಕೆ ನಿಗಮದಲಾಭಾಂಶ ಚೆಕ್ ಸಿಎಂಗೆ ಹಸ್ತಾಂತರ: ನಿಗಮದ ಕಾರ್ಯಕ್ಕೆ ಸಿಎಂ ಸಂತಸ

» ಚಳ್ಳಕೆರೆ

ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆಗಳ ಅಭಿವೃದ್ಧಿ ನಿಗಮಉತ್ತಮವಾಗಿಕೆಲಸಮಾಡುತ್ತಿದ್ದು,ಸರ್ಕಾರ ನೀಡಿದ ಅನುದಾನವನ್ನು ಬಳಿಸಿಕೊಳ್ಳುವಲ್ಲೂ ಸಹ ಜಾಣ್ಮೆಯನ್ನು ಪ್ರದರ್ಶಿಸಿದೆ. ಒಟ್ಟು 93.41 ಕೋಟಿ ಲಾಭಾಂಶದ ಚೆಕನ್ನು ನೀಡುವ ಮೂಲಕ ತನ್ನ ಜವಾಬ್ದಾರಿಯನ್ನು ಪ್ರದರ್ಶಿಸಿದ ಸಚಿವ ಶರಣಬಸಪ್ಪದರ್ಶನಾಪುರ, ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ ಮುಖ್ಯಮಂತ್ರಿಗೆ ಚೆಕ್ ಹಸ್ತಾಂತರಿಸಿದರು.

ಬೆಂಗಳೂರಿನ ಮುಖ್ಯಮಂತ್ರಿಗಳ ಕಾರ್ಯಾಲಯ ಕಾವೇರಿ ಭವನದಲ್ಲಿ ಗುರುವಾರ ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ 16.77 ಕೋಟಿ ಲಾಭಾಂಶ, 76.64 ಕೋಟಿ ವಿಶೇಷ ಲಾಭಾಂಶ ಒಟ್ಟು 93.41 ಕೋಟಿ ಚೆಕನ್ನು ಮುಖ್ಯಮಂತ್ರಿಗಳಿಗೆ ಹಸ್ತಾಂತರಿಸಿದ್ದು, ಚೆಕ್ ಸ್ವೀಕರಿಸಿ ಮಾತನಾಡಿದರು.



ಸಣ್ಣಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವ ಶರಣಬಸಪ್ಪದರ್ಶನಾಪುರ, ಸಣ್ಣಕೈಗಾರಿಕೆ ಅಭಿವೃದ್ದಿ ನಿಗಮ ರಾಜ್ಯಾಧ್ಯಕ್ಷರು, ಶಾಸಕ ಟಿ.ರಘುಮೂರ್ತಿ, ವ್ಯವಸ್ಥಾಪಕ ನಿರ್ದೇಶಕ ಕ್ಯಾಪ್ಟನ್‌ರಾಜೇಂದ್ರ, ಸಚಿವರ ಆಪ್ತಕಾರ್ಯದರ್ಶಿ ಶ್ರೀಶೈಲಾಬೀರಾದ್ಕರ್, ನಿಗಮದ ಅಧ್ಯಕ್ಷರ ಆಪ್ತಸಹಾಯಕ ಸೈಯಾದ್‌ಇಸಾಕ್ ಮುಂತಾದವರು ಉಪಸ್ಥಿತರಿದ್ದರು.

## ವಾತ್ಸಲ್ಯ ಯೋಜನೆ ಮನೆ ವಿತರಣೆ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಆಯ್ಕೆಯಾದ ವಸತಿಹೀನರಿಗೆ ವಾತ್ಸಲ್ಯ ಕಾರ್ಯಕ್ರಮ ಯೋಜನೆಯಡಿ ವಾತ್ಸಲ್ಯ ಮನೆಗಳನ್ನು ನಿರ್ಮಿಸಿಕೊಡಲಾಗುತ್ತದೆ. ಮೀರಸಾಬಿಹಳ್ಳಿ ವಲಯದ ಚಟ್ಟೆಕಂಬ ಗ್ರಾಮದ ವಾತ್ಸಲ್ಯ ಸದಸ್ಯರಾದ ಚಂದ್ರಣ್ಣನವರಿಗೆ ಮನೆ ನಿರ್ಮಿಸಿ ಹಸ್ತಾಂತರ ಮಾಡಲಾಗಿದೆ ಎಂದು ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ತಿಳಿಸಿದರು. ಅವರು, ಗುರುವಾರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಾತ್ಸಲ್ಯ ಮನೆ ವಿತರಣಾ ಕಾರ್ಯಕ್ರಮವನ್ನು ದೀಪಬೆಳಗುವಮೂಲಕ ಉದ್ಘಾಟಿಸಿ ಮಾತನಾಡಿದರು. ರಾಜ್ಯ ಸರ್ಕಾರ ವಿವಿಧ ಯೋಜನೆಗಳಲ್ಲಿ ಅರ್ಹ ಬಡವರಿಗೆ ನಿವೇಶನ ಹಾಗೂ ಮನೆ ನಿರ್ಮಿಸಿಕೊಡುತ್ತದೆ. ಸರ್ಕಾರದ ಯೋಜನೆಗಳನ್ನು ಹೊರತು ಪಡಿಸಿ ನಮ್ಮ ಸಂಸ್ಥೆಯಿಂದಲೂ ಇಂತಹ ಕಾರ್ಯಕ್ರಮ ಆಯೋಜಿಸಿ ಜನರಿಗೆ ನೆರವು ನೀಡಲಾಗುತ್ತಿದೆ ಎಂದರು. ವಾತ್ಸಲ್ಯ ಮನೆಯನ್ನು ಪಡೆದ ಫಲಾನುಭವಿ ಚಂದ್ರಣ್ಣ ಮಾತನಾಡಿ, ತಾಲ್ಲೂಕು ಯೋಜನಾಧಿಕಾರಿ ಹಾಗೂ ಜಿಲ್ಲಾ ನಿರ್ದೇಶಕರು ನನಗೆ ವಾತ್ಸಲ್ಯ ಯೋಜನೆಯಡಿ ಈ ಮನೆ ನೀಡಿದ್ದು, ಸಂತಸ ತಂದಿದೆ. ಇಂತಹ ಯೋಜನೆಗಳಿಂದ ನೆಲೆ, ಸೂರಿನಲ್ಲದ ಬಡವರು ಸಹ ನೆಮ್ಮದಿಯ ಬದುಕನ್ನು ಕಂಡುಕೊಳ್ಳಬಹುದಾಗಿದೆ ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೌರಮ್ಮ, ಸದಸ್ಯರಾದ ಭೀಮಣ್ಣ, ಭಾಗ್ಯಮ್ಮ, ಅಂಜನರೆಡ್ಡಿ, ಗ್ರಾಮ ಮುಖಂಡ ವೀರಭದ್ರಪ್ಪ, ವೀರಣ್ಣ, ವಲಯ ಮೇಲ್ವಿಚಾಕರಾದ ನೀಲಮ್ಮ, ಜ್ಞಾನ ವಿಕಾಸಸಮನ್ವಧಿಕಾರಿ ಇಂದಿರಾಭವಾನಿ, ಸೇವಾಪ್ರತಿನಿಧಿ ಮಧು ಪಾಲ್ಗೊಂಡಿದ್ದರು.

## ಅಂತಿಮ ಆಯ್ಕೆ ಪ್ರಕಟ

**ದಾವಣಗೆರೆ:** ಗ್ರಾಮ ಪಂಚಾಯತಿ ಗ್ರಂಥಾಲಯಕ್ಕೆ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಖಾಲಿ ಹುದ್ದೆಗಳಿಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು davanagere.nic.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾ.ಪಂ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿ ಅಧ್ಯಕ್ಷರಾದ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

## ಮೇಲ್ವಿಚಾರಣಾ ಸಮಿತಿಸಭೆ

**ದಾವಣಗೆರೆ:** ಜಿಲ್ಲಾಧಿಕಾರಿ ಗಂಗಾಧರಸ್ವಾಮಿ. ಅವರ ಅಧ್ಯಕ್ಷತೆಯಲ್ಲಿ ಮಾರ್ಚ್ 7 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ, ಬುಡಕಟ್ಟು ಉಪಯೋಜನೆ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ.

**ಪ್ರಮುಖ ಸುದ್ದಿ**

# ಮಾತೆಸಾವಿತ್ರಿಬಾಪುಲೆ ಮಹಿಳಾ ಶಿಕ್ಷಣ ಕ್ಷೇತ್ರದ ಧ್ರುವತಾರೆ

» ಚಳ್ಳಕೆರೆ




ಕಳೆದ ಹಲವಾರು ದಶಕಗಳಿಂದ ಆಧುನಿಕತೆ ಹೆಸರಿನಲ್ಲಿ ಮಹಿಳೆಯರನ್ನು ಶಿಕ್ಷಣದಿಂದ ದೂರವಿಡುವ ಕೆಲಸ ನಿರಂತರ ನಡೆಯುತ್ತಿತ್ತು. ಮಹಿಳೆಗೆ ಅಕ್ಷರಜ್ಞಾನದ ಅಭಾವವಾಗಿತ್ತು, ಯಾವ ಹಂತದಲ್ಲೂ ಮಹಿಳೆಗೆ ಶಿಕ್ಷಣ ನೀಡಬೇಕೆಂಬ ಚಿಂತನೆ ಯಾರಿಗೂ ಇದ್ದಿಲ್ಲ. ಇಂತಹ ಸಂದರ್ಭದಲ್ಲಿ ಮಹಿಳೆಯರಿಗೆ ಶಿಕ್ಷಣದ ಬಗ್ಗೆ ಆಳಾವಾದ ಜ್ಞಾನವನ್ನು ನೀಡಿ ಅವರೂ ಈ ಸಮಾಜದಲ್ಲಿ ಎಲ್ಲರಂತೆ ಜ್ಞಾನಿಗಳಾಗಲು ಹೋರಾಟ ನಡೆಸಿದ ಸಾವಿತ್ರಿಬಾಪುಲೆ ಶಿಕ್ಷಣರಂಗದ ಧ್ರುವತಾರೆ ಎಂದು ಡಿಡಿಪಿಐ ಎಂ.ಆರ್.ಮಂಜುನಾಥ ತಿಳಿಸಿದರು.

ಅವರು, ಗುರುವಾರ ತಳಕು ಹೋಬಳಿ ಕ್ಲಸ್ಟರ್ ಮಟ್ಟದ ತರಾಸು ಶಿಕ್ಷಕರ ವೇದಿಕೆ ವತಿಯಿಂದ ಶಾದಿಮಹಲ್‌ನಲ್ಲಿ ಹಮ್ಮಿಕೊಂಡಿದ್ದ ಶ್ರೀಮಾತೆ ಸಾವಿತ್ರಿಬಾಪುಲೆ ಜಯಂತಿ ಹಾಗೂ ಶೈಕ್ಷಣಿಕ ಕಾರ್ಯಗಾರವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಮಹಿಳೆಯರನ್ನು ಶಿಕ್ಷಣವಂತರನ್ನಾಗಿ ಮಾಡುವಲ್ಲಿ ಮಾತೆ ಸಾವಿತ್ರಿಬಾಪುಲೆಯವರ ಕಾರ್ಯ ಶ್ಲಾಘನೀಯವಾದದ್ದು, ಇಂದಿಗೂ ಸಹ ಇವರು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆಯ ಬಗ್ಗೆ ಎಲ್ಲರಿಗೂ ಅಪಾರವಾದ ಗೌರವವಿದೆ ಎಂದರು. ವೇದಿಕೆ ಅಧ್ಯಕ್ಷ ಪಿ.ಮಹಂತೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಾತೆ ಸಾವಿತ್ರಿಬಾಪುಲೆಯವರ ಜಯಂತಿಯನ್ನು ತಳಕು ಹೋಬಳಿ ಮಟ್ಟದಲ್ಲೇ ಆಚರಿಸಬೇಕೆಂಬ ಮಹಿಳಾ ಶಿಕ್ಷಕರ ಮನವಿಗೆ ಸ್ಪಂದಿಸಿ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ತಳಕು ಹೋಬಳಿ ಮಟ್ಟದಲ್ಲಿ 290 ಶಿಕ್ಷಕರಿದ್ದು, ಅದರಲ್ಲಿ 163 ಮಹಿಳಾ ಶಿಕ್ಷಕರೇ ಇದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಮಹಿಳೆಯರ ಪಾತ್ರವೂ ಗಣನೀಯವಾಗಿದೆ. ಮಹಿಳೆ ಶಿಕ್ಷಣವಂತಳಾದರೆ ಸಮಾಜವೆ ಶಿಕ್ಷಣದತ್ತ ಗಮನಿಸುತ್ತದೆ ಎಂದರು.

ಮಾತೆಸಾವಿತ್ರಿಬಾಪುಲೆ ಬಗ್ಗೆ ಸುಧೀರ್ಘವಾದ ಉಪನ್ಯಾಸ ನೀಡಿದ ಉಪನ್ಯಾಸಕ ಕೆ.ವಿ.ವೆಂಕಟೇಶ್‌ಮೂರ್ತಿ, 1940ರ ದಶಕದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅಭಿವೃದ್ದಿಯ ಪರ್ವ ಆಗಷ್ಟೇ ಆರಂಭವಾಗಿತ್ತು. ಶಿಕ್ಷಣವನ್ನು ಪಡೆಯಲು ಎಲ್ಲರೂ ಹಿಂದೇಟು ಹಾಕುತ್ತಿದ್ದರು. ವಿಶೇಷವಾಗಿ ಯಾವ ಮಹಿಳೆಯೂ ಶಿಕ್ಷಣದತ್ತ ಮುಖಮಾಡಿರಲಿಲ್ಲ. ಆದರೆ, ಶಿಕ್ಷಣದ ಪ್ರಗತಿಗೆ ಮಹಿಳೆಯರ ಪಾತ್ರ ಅತ್ಯಗತ್ಯವೆಂಬುವುದನ್ನು ಮಾತೆಸಾವಿತ್ರಿಬಾಪುಲೆ ತಮ್ಮ ಹೋರಾಟ ಹಾಗೂ ಮಹಿಳೆಯರನ್ನು ಶಿಕ್ಷಣ ಕ್ಷೇತ್ರಕ್ಕೆ ತೊಡಗಿಸುವ ನಿಟ್ಟಿನಲ್ಲಿ ಇಡೀ ದೇಶವೇ ಬೆರಗಾಗುವಂತೆ ತೋರಿಸಿಕೊಟ್ಟಿದ್ದಾರೆ.

ಸಾವಿತ್ರಿಬಾಪುಲೆ ಮಹಿಳಾ ಸಮುದಾಯದಲ್ಲಿ ತಲೆದೋರಿದ್ದ ಶಿಕ್ಷಣ ಬಗ್ಗೆ ಅವರಿದ್ದ ಅನುಮಾನಗಳಿಗೆ ತೆರೆಎಳೆದು ಪ್ರತಿಯೊಬ್ಬ ಮಹಿಳೆಯೂ ಶಿಕ್ಷಣ ಕಲಿಯುವಂತೆ ಪ್ರೇರೇಪಿಸಿದ ಮಹಿಳಾಶಕ್ತಿ ಸಾವಿತ್ರಿಬಾಪುಲೆಯವರು. ಸಾವಿತ್ರಿಬಾಪುಲೆಯವರ ಪ್ರಭಾವ ಪ್ರಮೇಣವಾಗಿ ಇಡೀ ಶಿಕ್ಷಣ ಕ್ಷೇತ್ರವನ್ನೆ ವ್ಯಾಪಿಸಿಕೊಂಡಿತ್ತು. ಇಂದಿಗೂ ಸಹ ಸಾವಿತ್ರಿಬಾಪುಲೆ ಶಿಕ್ಷಣ ಕ್ಷೇತ್ರಕ್ಕೆ ಆದರ್ಶಪ್ರಾಯರು. ಮಹಿಳೆ ಶಿಕ್ಷಣವನ್ನು ಕಲಿತು ತಾನಷ್ಟೇ ಜ್ಞಾನಿಯಾಗದೆ ಎಲ್ಲರಿಗೂ ಜ್ಞಾನದ ದೀಕ್ಷೆಯನ್ನು ನೀಡಿದ್ದಾರೆ. ಸಾವಿತ್ರಿಬಾಪುಲೆ ಶಿಕ್ಷಣ ಕ್ಷೇತ್ರ ಎಂದೂ ಮರೆಯದ ಮಹಾನ್‌ಕೊಡುಗೆ ನೀಡಿದ್ದಾರೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಹೋಬಳಿ ಮಟ್ಟದಲ್ಲಿಯೇ ಸಾವಿತ್ರಿಬಾಪುಲೆಯವರ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ತರಾಸು ಶಿಕ್ಷಕರ ವೇದಿಕೆ ಎಲ್ಲರಿಗೂ ಮಾದರಿಯಾಗಿದೆ. ಮಹಿಳಾ ಶಿಕ್ಷಕರಿಗೆ ಸಾವಿತ್ರಿಬಾಪುಲೆ ಎಂದಿಗೂಆದರ್ಶಪ್ರಾಯರು.ಶಿಕ್ಷಣಕ್ಷೇತ್ರದ ಪ್ರಗತಿಗೆ ಎಲ್ಲಾ ಶಿಕ್ಷಕರು ಕೈಜೋಡಿಸಬೇಕು, ನಿಮ್ಮ ನಿರಂತರ ಪರಿಶ್ರಮ ಪ್ರಾಮಾಣಿಕ ಕೆಲಸ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಮೌಲ್ಯವನ್ನು ತಂದುಕೊಡುವಂತಾಗಬೇಕು ಎಂದರು.

ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಟಿ.ವೀರೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ ಸಣ್ಣಸೂರಮ್ಮ, ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜಿ.ಬಿ.ಮಹಂತೇಶ್, ಜಿಲ್ಲಾ ಅನುದಾನರಹಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಸುರೇಶ್, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಪಿ.ರಾಜಣ್ಣ, ಜಿ.ತಿಪ್ಪೇಸ್ವಾಮಿ, ಕೃಷ್ಣಮೂರ್ತಿ, ಮಾರುತಿಭಂಡಾರಿ, ಜಾಕೀರ್‌ಹುಸೇನ್, ಅಶೋಕ್, ಪ್ರಹ್ಲಾದ್, ಪಿಡಿಒ ಓಬಣ್ಣ, ಶಶಿರಾಜ್, ಮಾರಣ್ಣ, ರಾಧಮಣಿ, ಸುಜಾತ, ಜಯಲಕ್ಷ್ಮಿ, ಸೌಭಾಗ್ಯಮ್ಮ, ತಿಪ್ಪಮ್ಮ ಮುಂತಾದವರು ಉಪಸ್ಥಿತರಿದ್ದರು.



# Hell week ನರಕ ವಾರ



ಬೆಳಗಿನ ಓಟದ ಸಮಯದಲ್ಲಿ ಎಂದಿನಂತೆ ಮಾಜಿ ಯೋಧರೊಬ್ಬರು ಜೊತೆಯಾಗಿದ್ದರು. ಹೀಗೆ ಲೋಕಾಭಿರಾಮವಾಗಿ ಆ ಗೆಳೆಯರ ಬಳಿ ಮಾತನಾಡುತ್ತಿರುವಾಗ ಅವರು ಹೆಲ್ ವೀಕ್ ಬಗ್ಗೆ ಹೇಳಿದರು....

ಅದರ ಬಗ್ಗೆ ಕುತೂಹಲ ಹೆಚ್ಚಾಗಿ ಅವರು ನೀಡಿದ ಮಾಹಿತಿಯನ್ನು ನಿಮ್ಮೊಂದಿಗೆ ಹಂಚಿಕೊಳ್ಳುತ್ತಿದ್ದೇನೆ.....

ಸಾಮಾನ್ಯವಾಗಿ ವಿಶ್ವದ ಅತ್ಯಂತ ಕಠಿಣ ಸೈನಿಕ ತರಬೇತಿಗಳಲ್ಲಿ ಮುಖ್ಯವಾಗಿ ಕಮಾಂಡೋ ತರಬೇತಿ ಶಿಬಿರಗಳಲ್ಲಿ 5, 1/2 ( ಐದುವರೆ ) ದಿನಗಳ ಟ್ರೈನಿಂಗ್ ಇರುತ್ತದೆ. ಬಹುತೇಕ ನಮ್ಮ ಕಾಲ್ಪನಿಕ ನರಕದ ರೀತಿಯಲ್ಲಿಯೇ ಅತ್ಯಂತ ಕಠಿಣ ಪರಿಸ್ಥಿತಿಯನ್ನು ಎದುರಿಸುವುದು ಹೇಗೆ ಎಂದು ಅನುಭವದ ಮೂಲಕ ಅರ್ಥ ಮಾಡಿಸಲಾಗುತ್ತದೆ ಅದನ್ನು ಅನುಭವಿಸಿಯೇ ನೋಡಬೇಕು. ಪದಗಳಲ್ಲಿ ವರ್ಣಿಸುವುದು ಸ್ವಲ್ಪ ಕಷ್ಟವೇ ಆದರೂ........

ಇದ್ದಕ್ಕಿದ್ದಂತೆ ಮಧ್ಯರಾತ್ರಿಯಲ್ಲಿ ನಿದ್ದೆಯಿಂದ ಎಚ್ಚರಿಸಲಾಗುತ್ತದೆ. ಸುಮಾರು 20 /30/40 ಕೆ.ಜಿಯ ತೂಕದ ವಸ್ತುವನ್ನು ನೀಡಿ ನೂರಾರು ಕಿಲೋಮೀಟರ್ಗಳ ವರೆಗೆ ನಡೆಸಲಾಗುತ್ತದೆ. ಮಧ್ಯದಲ್ಲಿ ಯಾವುದೇ ನೀರು ಆಹಾರವನ್ನು ಕೊಡುವುದಿಲ್ಲ. ಅಷ್ಟು ದೂರ ನಡೆದ ನಂತರ ಇದ್ದಕ್ಕಿದ್ದಂತೆ ಭಕ್ಷ್ಯ ಭೋಜನಗಳನ್ನು ನೀಡಲಾಗುತ್ತದೆ. ಅದನ್ನು ಸವಿದು ಅರ್ಧ ಗಂಟೆಯ ನಂತರ ಮತ್ತೆ ಒಳ್ಳೆಯ ಊಟ ನೀಡಲಾಗುತ್ತದೆ ಅಂದರೆ ಮತ್ತೆ ತಿಂದು ದೇಹ ಹೇಗೆ ಒಗ್ಗಿಕೊಳ್ಳುತ್ತದೆ ಎಂಬುದು ಒಂದು ವಿಧಾನವಾದರೆ ಮುಂದೆ ಎರಡು ದಿನಗಳ ಕಾಲ ಯಾವುದೇ ಸಿದ್ಧಪಡಿಸಿದ ಆಹಾರ ನೀಡುವುದಿಲ್ಲ. ಕಾಡಿನಲ್ಲಿರುವ ಹಣ್ಣು ಕಾಯಿ ಎಲೆಗಳನ್ನೇ ತಿಂದು ಬದುಕಬೇಕಾಗುತ್ತದೆ. ಹಾಗೆಯೇ ದೊಡ್ಡ ದೊಡ್ಡ ಪ್ರಪಾತಗಳನ್ನ ನೀರಿನ ಪ್ರವಾಹಗಳನ್ನ ದಾಟಿ ಮುನ್ನಡೆಯಬೇಕಾಗುತ್ತದೆ.

ತೀವ್ರ ಚಳಿ ಮಳೆ ಗಾಳಿ ಬಿಸಿಲಿನ ವಾತಾವರಣಕ್ಕೆ ದೇಹವನ್ನು ನುಚ್ಚುಗುಜ್ಜಾಗುವಂತೆ ದಂಡಿಸಲಾಗುತ್ತದೆ. ಅನೇಕ ಬಾರಿ ಆಸೆಗಳನ್ನು ತೋರಿಸಿ ಅದನ್ನು ಕೊಡುವುದಿಲ್ಲ. ಒತ್ತಡ ಸೃಷ್ಟಿಸಿ ನಿರಾಸೆ ಮೂಡಿಸುತ್ತಾರೆ.....

ಇಷ್ಟೊಂದು ಕಠಿಣ ಪರಿಶ್ರಮ ಏಕೆಂದರೆ ನಿಜವಾದ ಯುದ್ಧಭೂಮಿಯಲ್ಲಿ ಅಥವಾ ಕಠಿಣ ಸಂದರ್ಭದಲ್ಲಿ ಎಲ್ಲ ರೀತಿಯ ಪರಿಸ್ಥಿತಿಗಳನ್ನು ಎದುರಿಸಲು ಮಾನಸಿಕ ಸಿದ್ಧತೆಯನ್ನು ಮಾಡಿಕೊಳ್ಳಲು ಇದು ಸಹಾಯಮಾಡುತ್ತದೆ. ಕೇವಲ ಆಹಾರ ಮತ್ತು ದೈಹಿಕ ಶ್ರಮ ಮಾತ್ರವಲ್ಲ ನಿದ್ರೆಯ ಸಮಯವನ್ನು ಸಹ ಕಸಿದುಕೊಳ್ಳಲಾಗುತ್ತದೆ. ವಿಶ್ರಾಂತಿ ಅವಶ್ಯಕತೆಯನ್ನು ನಿರಾಕರಿಸಲಾಗುತ್ತದೆ.....

ಸೋಮವಾರದಿಂದ ಶುಕ್ರವಾರದವರೆಗೆ ಆ ಇಡೀ ವಾರ ಕಾಲಿನಿಂದ ಶೂ ಸಹ ಬಿಚ್ಚಲು ಬಿಡುವುದಿಲ್ಲ. ಈ ತರಬೇತಿಯಲ್ಲಿ ಮೇಲಧಿಕಾರಿಗಳು ದಿಢೀರನೆ, ಇದ್ದಕ್ಕಿದ್ದಂತೆ ವಿರುದ್ಧ ಆದೇಶಗಳನ್ನು ಸಹ ಕೊಡುತ್ತಾರೆ. ಅದನ್ನು ಸಹ ಚಾಚೂ ತಪ್ಪದೇ ಪಾಲಿಸಬೇಕು. ಯಾವುದನ್ನು ಪ್ರಶ್ನಿಸುವಂತಿಲ್ಲ. ನರಕದಲ್ಲಿ ನಡೆಯಬಹುದಾದ ಅತ್ಯಂತ ಕ್ರೌರ್ಯದ ಘಟನೆಗಳನ್ನು ನಾವು ಹೇಗೆ ಕಲ್ಪಿಸಿಕೊಳ್ಳಲು ಸಾಧ್ಯವಿದೆಯೋ ಅಷ್ಟೇ ಪ್ರಮಾಣದಲ್ಲಿ ತರಬೇತಿ ಶಿಬಿರ ಇರುತ್ತದೆ. ಆದರೆ ಜೀವ ಹಾನಿಯಾಗದಂತೆ ಎಲ್ಲವೂ ವಾಸ್ತವಿಕವಾಗಿ ನಡೆಯುತ್ತದೆ. ಈ ಕಠಿಣ ತರಬೇತಿಯನ್ನ ಪಡೆದ ನಂತರ ಯೋಧ ಅಥವಾ ಕಮಾಂಡೋ ಹೆಚ್ಚು ಬಲಿಷ್ಠನಾಗಿ ತನ್ನ ಕಾರ್ಯವನ್ನು ನಿರ್ವಹಿಸುತ್ತಾನೆ ಎಂಬ ಭರವಸೆ ಮೂಡುತ್ತದೆ.....

ಇದನ್ನು ಇಲ್ಲಿ ಪ್ರಸ್ತಾಪಿಸಲು ಕಾರಣ ಸಾಮಾನ್ಯರ ಜನರಾದ ನಾವುಗಳು ಈ ನರಕ ವಾರದಿಂದ ಎಷ್ಟು ದೂರವಿದ್ದೇವೆ ಅಥವಾ ಅದರ ಅನುಭವ ನಮಗೆ ಆಗಿದೆಯೇ ಎಂದು ಪ್ರಶ್ನಿಸಿಕೊಂಡಾಗ, ಹೌದು, ಕೆಲವು ಸಂದರ್ಭಗಳಲ್ಲಿ ಇಷ್ಟೇ ಪ್ರಮಾಣದ ನೋವುಗಳನ್ನು ಕೆಲವರು ಅನುಭವಿಸಿರುವ ಸಾಧ್ಯತೆ ಇದೆ. ಆದರೆ ಶೇಕಡ 90ರಷ್ಟು ಜನ ಇಷ್ಟು ಕಠಿಣ ಪರಿಸ್ಥಿತಿಯನ್ನು ಎದುರಿಸಿರುವುದಿಲ್ಲ. ಹಾಗೆ ಈ 90 ಭಾಗದಲ್ಲಿ ಒಂದು 40ರಷ್ಟು ಜನ ತುಂಬಾ ಸುಖವಾಗಿಯೇ ಇರುತ್ತಾರೆ. ಶ್ರೀಮಂತರ, ಕೆಲವು ರಾಜಕಾರಣಿಗಳ, ದೊಡ್ಡ ಅಧಿಕಾರಿಗಳ, ಉದ್ಯಮಿಗಳ ಮಕ್ಕಳು ಸಾಮಾನ್ಯವಾಗಿ ಇಷ್ಟೊಂದು ಕಠಿಣ ಪರಿಸ್ಥಿತಿಯನ್ನು ಎದುರಿಸಿ ಇರುವುದಿಲ್ಲ. ಅದರಿಂದಾಗಿಯೇ ಅವರ ನಡವಳಿಕೆಗಳು ಸ್ವಲ್ಪ ಉಡಾಫೆಯಾಗಿ ಮತ್ತಷ್ಟು ಜೀವ ವಿರೋಧಿಯಾಗಿ ಇನ್ನೊಂದಿಷ್ಟು ಅಹಂಕಾರದಿಂದಲೂ ಕೂಡಿರುತ್ತದೆ....


## ಹೆಚ್ಚು ಶ್ರಮ ಹೆಚ್ಚು ಲಾಭ

(More pain More gain ) ಎಂಬ ಇಂಗ್ಲಿಷ್ ನಾಣ್ಣುಡಿ ಮತ್ತು ಕನ್ನಡದ " ಕೈ ಕೆಸರಾದರೆ ಬಾಯಿ ಮೊಸರು " ಎಂಬ ಕನ್ನಡ ಗಾದೆಯು ಇದೇ ಸಂದರ್ಭದಲ್ಲಿ ನೆನಪಿಗೆ ಬರುತ್ತಿದೆ. ಏಕೆಂದರೆ ನಾವು ಎಷ್ಟು ಶ್ರಮ ಪಡುತ್ತಿವೋ ಅಷ್ಟರಮಟ್ಟಿಗೆ ಸಾಮಾನ್ಯವಾಗಿ ನಮಗೆ ಪ್ರತಿಫಲ ಸಿಗುತ್ತದೆ. ಇದಕ್ಕೆ ಕೆಲವೊಮ್ಮೆ ಅಪವಾದವು ಇದೆ.....

ಬದುಕಿನಲ್ಲಿ ನಿಜವಾದ ಸುಖದ ಅನುಭವವಾಗಬೇಕಾದರೆ ಕಷ್ಟದ ಅನುಭವವು ಸಹ ಬೇಕಾಗುತ್ತದೆ. ಆಗ ಮಾತ್ರ ನಿಜಕ್ಕೂ ಸುಖದ ಆಳ ಅನುಭವ ಅರಿವಾಗುತ್ತದೆ. ಅದನ್ನು ನಿಮಗೆ ಮತ್ತೊಮ್ಮೆ ನೆನಪಿಸಲು ಈ ಲೇಖನ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



---


## ಮಾರ್ಚ್ 09ರಂದು ಮ್ಯಾರಥಾನ್ ಓಟ

» ಚಿತ್ರದುರ್ಗ

ಜಿಲ್ಲಾ ಪೊಲೀಸ್ ಮತ್ತು ಎಸ್‌ಬಿಐ ಬ್ಯಾಂಕ್ ಅವರ ಸಹಯೋಗದಲ್ಲಿ "ನಮ್ಮ ಪೊಲೀಸ್ ನಮ್ಮ ಹೆಮ್ಮೆ" Fitness for all" & "Drugs Free Karnataka" ಎಂಬ ಘೋಷವಾಕ್ಯಗಳೊಂದಿಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇದೇ ಮಾರ್ಚ್ 09ರಂದು ಬೆಳಿಗ್ಗೆ 7ಕ್ಕೆ ಚಿತ್ರದುರ್ಗ ನಗರದ ಡಿಎಆರ್ ಪರೇಡ್ ಮೈದಾನದಿಂದ ಸಾರ್ವಜನಿಕರಿಗೆ 5 & 10 ಕಿಲೋಮೀಟರ್‌ಗಳ ಮ್ಯಾರಥಾನ್ ಓಟ ಆಯೋಜಿಸಲಾಗಿದೆ. ಈ ಮ್ಯಾರಥಾನ್ ಚಿತ್ರದುರ್ಗ ನಗರದ ಡಿ.ಎ.ಆರ್ ಪರೇಡ್ ಮೈದಾನದಿಂದ ಪ್ರಾರಂಭವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ 5 ಕಿ.ಮೀ ಮತ್ತು 10ಕಿ.ಮೀ ಗಳ ಅಂತರ ಕ್ರಮಿಸಿದ ನಂತರ ಡಿ.ಎ.ಆರ್ ಪರೇಡ್ ಮೈದಾನದಲ್ಲಿಯೇ ಮುಕ್ತಾಯವಾಗಲಿದ್ದು, ಈ ಮ್ಯಾರಥಾನ್‌ನಲ್ಲಿ ವಿಜೇತರಾದವರಿಗೆ ಬಹುಮಾನ ನೀಡಲಾಗುವುದು.ಮ್ಯಾರಥಾನ್‌ನಲ್ಲಿ ಪಾಲ್ಗೊಂಡ ಪ್ರತಿಯೊಬ್ಬರಿಗೂ ಸಹ ಪೊಲೀಸ್ ಇಲಾಖೆಯಿಂದ ಟೀ–ಶರ್ಟ್ ನೀಡಲಾಗುವುದು ಹಾಗೂ ಲಘು ಉಪಹಾರದ ವ್ಯವಸ್ಥೆ ಮಾಡಲಾಗಿರುತ್ತದೆ.ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಮ್ಯಾರಥಾನ್‌ನಲ್ಲಿ ಪಾಲ್ಗೊಳ್ಳುವುದರ ಮೂಲಕ "Fitness for all" & "Drugs Free Karnataka" ಎಂಬ ಘೋಷಣೆಗಳೊಂದಿಗೆ ಪೊಲೀಸ್ ಇಲಾಖೆಯೊಂದಿಗೆ ಕೈಜೋಡಿಸಿ ಸ್ವಾಸ್ಥ್ಯ ಸಮಾಜದ ನಿರ್ಮಾಣಕ್ಕೆ ಸಹಕರಿಸಬೇಕಾಗಿ ಕೋರಿದೆ. ಮ್ಯಾರಥಾನ್‌ನಲ್ಲಿ ಪಾಲ್ಗೊಳ್ಳುವವರು ಕ್ಯೂಆರ್ ಕೋಡ್‌ನ್ನು ಸ್ಕ್ಯಾನ್ ಮಾಡುವ ಮೂಲಕ ಆನ್‌ಲೈನ್ ರಿಜಿಸ್ಟರ್ ಮಾಡಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅಧ್ಯಕ್ಷರಾಗಿ ಕಲ್ಮಠ್ ಆಯ್ಕೆ

» ಹೊಸದುರ್ಗ



ಪಟ್ಟಣದ ಶ್ರೀ ಗುರು ಒಪ್ಪತ್ತಿನಸ್ವಾಮಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಎಸ್.ಕಲ್ಮಠ್ ಆಯ್ಕೆಯಾಗಿದ್ದಾರೆ. ಶ್ರೀಯುತರು ಪಟ್ಟಣದ ಪ್ರತಿಷ್ಠಿತ ಎಸ್.ನಿಜಲಿಂಗಪ್ಪ ವಿದ್ಯಾಸಂಸ್ಥೆಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ ಇವರು ಹಲವಾರು ಕ್ಷೇತ್ರಗಳಲ್ಲಿ ಸಮಾಜ ಸೇವಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

## ನಾಯಕನಹಟ್ಟಿ ಜಾತ್ರೆ : ವಸ್ತು ಪ್ರದರ್ಶನ ವ್ಯವಸ್ಥಿತವಾಗಿರಲಿ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಕ್ಷೇತ್ರದ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಇಲಾಖೆಗಳ ಕಾರ್ಯಕ್ರಮಗಳು, ಯೋಜನೆಗಳು, ಸೌಲಭ್ಯಗಳು ಹಾಗೂ ಆಯಾ ಇಲಾಖೆಗೆ ಸಂಬಂಧಿಸಿದ ಇನ್ನಿತರೆ ವಿಷಯಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ವಸ್ತುಪ್ರದರ್ಶವನ್ನು ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರೆಯಲ್ಲಿ ವಸ್ತುಪ್ರದರ್ಶನ ಏರ್ಪಡಿಸುವ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾಯಕನಹಟ್ಟಿ ಗ್ರಾಮದ ಶ್ರೀ ಗುರುತಿಪ್ಪೇರುದ್ರಸ್ವಾಮಿ ಕ್ಷೇತ್ರದಲ್ಲಿ ಇದೇ ಮಾರ್ಚ್ 09 ರಿಂದ 24 ರವರೆಗೆ ಜಾತ್ರೆ ನಡೆಯಲಿದ್ದು, ಮಾರ್ಚ್ 16ರಂದು ದೊಡ್ಡ ರಥೋತ್ಸವ ನಡೆಯಲಿದೆ. ಜಾತ್ರೆಗೆ 3 ರಿಂದ 4 ಲಕ್ಷಕ್ಕೂ ಹೆಚ್ಚು ಭಕ್ತಾಧಿಗಳು ಆಗಮಿಸುವ ನಿರೀಕ್ಷೆ ಇದ್ದು, ಜಾತ್ರಾ ವೇಳೆಯಲ್ಲಿ ಜಿಲ್ಲಾ ಪಂಚಾಯಿತಿ ಸಹಕಾರದೊಂದಿಗೆ ಕನಿಷ್ಟ 10 ರಿಂದ 12 ಮಳಿಗೆಗಳಲ್ಲಿ ಕೃಷಿ, ಅರಣ್ಯ, ತೋಟಗಾರಿಕೆ, ಪಶುಸಂಗೋಪನೆ, ರೇಷ್ಮೆ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ಮುಂತಾದ ವಿವಿಧ ಇಲಾಖೆಗಳು ಪ್ರತಿ ವರ್ಷದಂತೆ ಈ ಬಾರಿಯೂ ಸಹ ವಸ್ತು ಪ್ರದರ್ಶವನ್ನು ವ್ಯವಸ್ಥಿತವಾಗಿ ಆಯೋಜಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಸ್ವ–ಸಹಾಯಕ ಸಂಘಗಳು ಹೆಚ್ಚಾಗಿರುವುದರಿಂದ ಸ್ವ–ಸಹಾಯ ಸಂಘಗಳ ಮಹಿಳಾ ಸದಸ್ಯರಿಗೆ ಆಹಾರ ಮಳಿಗೆ ಸ್ಥಾಪನೆಗೆ ಅವಕಾಶ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕಾರ್ಯಕ್ರಮಗಳು, ಸೌಲಭ್ಯಗಳ ಮಾಹಿತಿ ಸೇರಿದಂತೆ ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಪಶು ಸಂಗೋಪನಾ ಇಲಾಖೆಯುವರು ಹಕ್ಕಿ ಜ್ವರದ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು. ಜತೆಗೆ ಪಶು ಸಂಗೋಪನೆ ಇಲಾಖೆಯ ಕಾರ್ಯಕ್ರಮಗಳು, ಯೋಜನೆಗಳ ಬಗ್ಗೆ ಮಾಹಿತಿ ನೀಡಬೇಕು. ವಿಶೇಷವಾಗಿ ಕುರಿ ಸಾಕಾಣಿಕೆ ಕುರಿತು ಹಾಗೂ ಕುರಿಗಳ ತಳಿಗಳು ಬಗ್ಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಆರೋಗ್ಯ ಇಲಾಖೆ ವತಿಯಿಂದ ಎಬಿಆರ್‌ಕೆ ನೋಂದಣಿ ಕುರಿತು ವಸ್ತು ಪ್ರದರ್ಶನದಲ್ಲಿ ಮಾಹಿತಿ ನೀಡಬೇಕು. ತೋಟಗಾರಿಕೆ ಇಲಾಖೆ ವತಿಯಿಂದ ಫಲ–ಪುಷ್ಪ ಪ್ರದರ್ಶನಕ್ಕೆ ವ್ಯವಸ್ಥೆ ಮಾಡಿಕೊಳ್ಳಬೇಕು. ಎಂದು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ನರಸಿಂಹಮೂರ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.



ಹೊಸದುರ್ಗ ತಾಲೂಕು ಜಾನಕಲ್‌ನಲ್ಲಿ ವೆಂಕಟೇಶ್ವರ ಹಾಗೂ ಶಂಕರೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಕೆಂಡದಾರ್ಚನೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು

## ಇಂದು ಜಯಸುವರ್ಣಪುರಕ್ಕೆ ಬಸವಕುಮಾರ ಸ್ವಾಮಿ ಭೇಟಿ

» ಹೊಸದುರ್ಗ

ತಾಲೂಕಿನ ಇತಿಹಾಸ ಪ್ರಸಿದ್ಧ ಗ್ರಾಮವಾದ ಜಯಸುವರ್ಣಪುರಕ್ಕೆ ಇಂದು (ಮಾ 7 ರಂದು ಗುರುವಾರ) ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್ ಜೆ ಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಮಹಾಸ್ವಾಮಿಗಳವರು ಭೇಟಿ ನೀಡಲಿದ್ದು ಇಲ್ಲಿ ನಿರ್ಮಾಣ ಹಂತದಲ್ಲಿರುವ ಜಯಲಿಂಗೇಶ್ವರ ದೇವಸ್ಥಾನದ ಕೆಲಸ ವೀಕ್ಷಣೆ ಶಿವಾನುಭವ ಗೋಷ್ಠಿಯಲ್ಲಿ ಭಾಗವಹಿಸಲು ಇಂದು ಸಂಜೆ 5 ಗಂಟೆಗೆ ಗ್ರಾಮದ ಜನರೊಂದಿಗೆ ಚರ್ಚೆ ನಡೆಸಲಿದ್ದಾರೆ.

## ಆಂಜನೇಯ ಸ್ವಾಮಿ, ರಾಘವೇಂದ್ರ ಸ್ವಾಮಿಗೆ ಬೆಳ್ಳಿ ಕವಚ ಧಾರಣೆ



ಹೊಸದುರ್ಗ : ಪಟ್ಟಣದಲ್ಲಿ ನೆಲೆಸಿರುವ ಆಂಜನೇಯ ಸ್ವಾಮಿ ಹಾಗೂ ರಾಘವೇಂದ್ರ ಸ್ವಾಮಿಗೆ ಬೆಳ್ಳಿ ಕವಚ ಧಾರಣೆ ಅರ್ಚಕರುಗಳಾದ ಕೃಷ್ಣಾಚಾರ್ ಹಾಗೂ ಶ್ರೀನಿವಾಸ್ ಅವರ ನೇತೃತ್ವದಲ್ಲಿ ಗುರುವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಿತು. ಗುರುವಾರ ಬೆಳಿಗ್ಗೆ 5 ಗಂಟೆಗೆ ಶಿಲಾಮೂರ್ತಿಗಳಿಗೆ ನಿರ್ಮಲ್ಯ ಅಭಿಷೇಕ, ಪಂಚಾಮೃತ ಅಭಿಷೇಕ, ಸಂಕಲ್ಪ ಸೇವೆ, ಗಣಹೋಮ, ನವಗ್ರಹ ಹೋಮ, ರಾಮತಾರಕ ಹೋಮ, ಆಂಜನೇಯ ಸ್ವಾಮಿ ಹೋಮ ಹಾಗೂ ರಾಘವೇಂದ್ರ ತೀರ್ಥರ ಅಷ್ಟಾಕ್ಷರ ಹೋಮ ಧಾರ್ಮಿಕ ವಿಧಿಗಳನ್ವಯ ನಡೆಯಿತು.ನಂತರ ಸಕಲ ವಾದ್ಯಗೋಷ್ಠಿಗಳ ಸಮ್ಮುಖದಲ್ಲಿ ಆಂಜನೇಯ ಸ್ವಾಮಿ ಹಾಗೂ ರಾಘವೇಂದ್ರ ಸ್ವಾಮಿಗೆ ಬೆಳ್ಳಿ ಕವಚ ಧಾರಣೆ ಪ್ರಧಾನ ಅರ್ಚಕ ಕೃಷ್ಣಾಚಾರ್ ಹಾಗೂ ಸಹಾಯಕ ಅರ್ಚಕ ಶ್ರೀನಿವಾಸ್ ನೇತೃತ್ವದಲ್ಲಿ ನಡೆಯಿತು. ಮಹಾಮಂಗಳಾರತಿ ನಂತರ ಆರಂಭವಾದ ಅನ್ನದಾಸೋಹ ಅಚ್ಚುಕಟ್ಟಾಗಿ ನಡೆಯಿತು. 2 ಸಾವಿರಕ್ಕೂ ಅಧಿಕ ಜನರು ದೇವರ ದರ್ಶನ ಪಡೆದರು.ಭಕ್ತರು ಹಾಗೂ ಸೇವಾ ಸಮಿತಿ ವತಿಯಿಂದ ಆಂಜನೇಯ ಹಾಗೂ ರಾಘವೇಂದ್ರ ಸ್ವಾಮಿಗೆ 11 ಕೆ.ಜಿ. ಬೆಳ್ಳಿ ಬಳಸಿ, ಕವಚ ತಯಾರಿಸಲಾಗಿದೆ. ಸಿದ್ದಾಪುರದ ಪ್ರಶಾಂತ್ ಇದನ್ನು ತಯಾರಿಸಿಕೊಟ್ಟಿದ್ದಾರೆ. ಈ ವೇಳೆ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರಿದ್ದರು.

## ಕೋಳಿ ಫಾರಂ ಹಾಗೂ ಕೋಳಿ ಅಥವಾ ಮೊಟ್ಟೆ ಮಾರಾಟಗಾರರಿಗೆ ರೋಗ ಹರಡದಂತೆ ಎಚ್ಚರವಹಿಸಿ: ಜಿಲ್ಲಾಧಿಕಾರಿ

ದಾವಣಗೆರೆ: ಸಾರ್ವಜನಿಕರು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುವ ಅವೈಜ್ಞಾನಿಕ ಮಾಹಿತಿಗೆ ಕಿವಿಗೊಡಬೇಡಿ. ಕೋಳಿ ಮಾಂಸ ಮತ್ತು ಮೊಟ್ಟೆಯನ್ನು ಚೆನ್ನಾಗಿ ಬೇಯಿಸಿ ಸೇವಿಸುವುದರಿಂದ ಈ ರೋಗ ಬರುವುದಿಲ್ಲ, ಆದ್ದರಿಂದ ಸಾರ್ವಜನಿಕರು ಆತಂಕಪಡುವ ಅವಶ್ಯಕತೆ ಇಲ್ಲ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ. ಕೋಳಿ ಫಾರಂ ಹಾಗೂ ಮಾಂಸದ ಕೋಳಿ ಅಥವಾ ಮೊಟ್ಟೆ ಕೋಳಿ ಫಾರಂ, ಹಾಗೂ ಅಂಗಡಿ ಸುತ್ತಮುತ್ತ ಕಚ್ಚಾವಸ್ತುಗಳನ್ನು ಇಟ್ಟುಕೊಳ್ಳದೇ ಸುತ್ತಮುತ್ತಲೂ ಸೋಂಕು ನಿವಾರಕಗಳೊಂದಿಗೆ ಸ್ವಚ್ಛವಾಗಿಟ್ಟುಕೊಳ್ಳಬೇಕು. ತ್ಯಾಜ್ಯವನ್ನು ಆಗಿಂದಾಗ್ಗೆ ವೈಜ್ಞಾನಿಕವಾಗಿ ವಿಲೇವಾರಿ ಮಾಡುವುದರೊಂದಿಗೆ ಕೋಳಿ ಫಾರಂಗಳಲ್ಲಿ ಕೆಲಸ ಮಾಡುತ್ತಿರುವವರ ಆರೋಗ್ಯದ ಬಗ್ಗೆ ನಿಗಾವಹಿಸಿ, ಬಟ್ಟೆ, ಶೂ, ಕೈ ಕಾಲುಗಳಿಗೆ ನಂಜುನಾಶಕ ದ್ರಾವಣವನ್ನು ಕಡ್ಡಾಯವಾಗಿ ಬಳಸಬೇಕು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T